ಸಂಪುಟ 01 | ಸಂಚಿಕೆ 36 | ಬುಧವಾರ 17 ಡಿಸೆಂಬರ್ 2025 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೇಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1.ಅಂತರರಾಷ್ಟ್ರೀಯ ಒಕ್ಕೂಟಗಳನ್ನು ಕೊನೆಗೊಳಿಸುವ ದಿನ (International Day to End** ಈ ದಿನವನ್ನು ಪ್ರಪಂಚದಾದ್ಯಂತ ಲೈಂಗಿಕ ಕಾರ್ಯಕರ್ತರ ಮೇಲಿನ ದೌರ್ಜನ್ಯ ಮತ್ತು ತಾರತಮ್ಯವನ್ನು ಕೊನೆಗೊಳಿಸಲು ಮತ್ತು ಅವರ ಮಾನವ ಹಕ್ಕುಗಳನ್ನು ಗುರುತಿಸಲು ಮೀಸಲಿಡಲಾಗಿದೆ. ಮಹತ್ವ: ದೌರ್ಜನ್ಯಕ್ಕೊಳಗಾದ ಲೈಂಗಿಕ ಕಾರ್ಯಕರ್ತರನ್ನು ನೆನಪಿಸಿಕೊಳ್ಳುವುದು, ಅವರ ಸುರಕ್ಷತೆಗಾಗಿ ಮತ್ತು ಅವರ ವಿರುದ್ಧದ ಪೂರ್ವಾಗ್ರಹಗಳನ್ನು ಹೋಗಲಾಡಿಸಲು ಕೆಲಸ ಮಾಡುವಂತೆ ಸಮುದಾಯಕ್ಕೆ ಕರೆ ನೀಡುವುದು ಇದರ ಮುಖ್ಯ ಉದ್ದೇಶವಾಗಿದೆ. ಇದು ಲೈಂಗಿಕ ಕಾರ್ಯಕರ್ತರ ಹಕ್ಕುಗಳನ್ನು ಸಮರ್ಥಿಸುವ ಒಂದು ಪ್ರಮುಖ ಜಾಗತಿಕ ದಿನವಾಗಿದೆ.

**2. ರಾಷ್ಟ್ರೀಯ ಮೇಪಲ್ ಸಿರ್ಪ್ ದಿನ (National Maple Syrup Day) –** ಈ ದಿನವನ್ನು ಮೇಪಲ್ ಸಿರ್ಪ್ (Maple Syrup)ನ ವಿಶಿಷ್ಟ ರುಚಿ ಮತ್ತು ಅದನ್ನು ವಿವಿಧ ಆಹಾರಗಳಲ್ಲಿ (ಪ್ಯಾನ್‌ಕೇಕ್‌ಗಳು, ವೇಫಲ್‌ಗಳು ಇತ್ಯಾದಿ) ಬಳಸುವುದು.

## ಸುಭಾಷಿತ

**ನೀವು ಜೀವನವನ್ನು ಪ್ರೀತಿಸುತ್ತೀರಿ ಎಂದಾದರೆ, ಸಮಯ ಹಾಳು ಮಾಡಬೇಡಿ. ಏಕೆಂದರೆ, ಸಮಯವೇ ಜೀವನ!**

**–ಬ್ರೂಸ್ ಲೀ**

# ರಾಜ್ಯದಲ್ಲಿ 2809 ರೈತರ ಆತ್ಮಹತ್ಯೆ

## ದೇಶದಲ್ಲಿ ಕರ್ನಾಟಕಕ್ಕೆ 2ನೇ ಸ್ಥಾನ :ಸಚಿವ ಚೆಲುವರಾಯಸ್ವಾಮಿ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಕಳೆದ 2023–24ರ ಆರ್ಥಿಕ ವರ್ಷದಿಂದ ಇಲ್ಲಿಯವರೆಗೆ ರಾಜ್ಯದಲ್ಲಿ ಒಟ್ಟು 2,809 ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ, ರಾಜ್ಯವು ದೇಶದಲ್ಲಿ ಇಂತಹ ಆತ್ಮಹತ್ಯೆಗಳಲ್ಲಿ ಎರಡನೇ ಸ್ಥಾನದಲ್ಲಿದೆ ಎಂದು ಸಚಿವ ಎನ್ ಚೆಲುವರಾಯಸ್ವಾಮಿ ವಿಧಾನಸಭೆಗೆ ತಿಳಿಸಿದ್ದಾರೆ.**

ಬೆಳಗಾವಿಯಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ಬಿಜೆಪಿ ಶಾಸಕ ಅರವಿಂದ್ ಬೆಲ್ಲದ್ ಅವರ ಪ್ರಶ್ನೆಗೆ ಲಿಖಿತ ಉತ್ತರ ನೀಡಿದ ರಾಜ್ಯ ಕೃಷಿ ಸಚಿವರು, 2023–24ರ ಆರ್ಥಿಕ ವರ್ಷದಲ್ಲಿ 1,254 ರೈತರ ಆತ್ಮಹತ್ಯೆಗಳು ವರದಿಯಾಗಿವೆ, 2024–25ರಲ್ಲಿ 1,178 ಮತ್ತು 2025–26ರಲ್ಲಿ (ಈಗ) 377 ಪ್ರಕರಣಗಳು ದಾಖಲಾಗಿವೆ ಎಂದು ಹೇಳಿದರು. ರಾಷ್ಟ್ರೀಯ ಅಪರಾಧ ದಾಖಲೆಗಳ ಬ್ಯೂರೋ ಪ್ರಕಾರ, ಕರ್ನಾಟಕವು ರೈತರ ಆತ್ಮಹತ್ಯೆಯಲ್ಲಿ ರಾಷ್ಟ್ರೀಯ ಮಟ್ಟದಲ್ಲಿ ಎರಡನೇ ಸ್ಥಾನದಲ್ಲಿದೆ. ಆದಾಗ್ಯೂ, ಹಿಂದಿನ ಮೂರು ವರ್ಷಗಳಿಗೆ ಹೋಲಿಸಿದರೆ ಆತ್ಮಹತ್ಯೆಗಳಲ್ಲಿ ಇಳಿಕೆ ಕಂಡುಬಂದಿದೆ ಎಂದು ಚೆಲುವರಾಯಸ್ವಾಮಿ ತಿಳಿಸಿದ್ದಾರೆ.




ಸಚಿವರು ಒದಗಿಸಿದ ದತ್ತಾಂಶದ ಪ್ರಕಾರ, ಹಾವೇರಿಯಲ್ಲಿ ಅತಿ ಹೆಚ್ಚು ಆತ್ಮಹತ್ಯೆ ಪ್ರಕರಣಗಳು ವರದಿಯಾಗಿವೆ, ಇದರಲ್ಲಿ 297 ಪ್ರಕರಣಗಳು, ನಂತರ ಬೆಳಗಾವಿಯಲ್ಲಿ 259, ಕಲಬುರಗಿಯಲ್ಲಿ 234, ಧಾರವಾಡದಲ್ಲಿ 195 ಮತ್ತು ಮೈಸೂರು (190) ಇವೆ.ಪರಿಹಾರದ ವಿಷಯದಲ್ಲಿ, ರಾಜ್ಯ ಸರ್ಕಾರವು 2023–24ರಲ್ಲಿ 1,081 ಅರ್ಹ ರೈತ ಕುಟುಂಬಗಳಿಗೆ 54 ಕೋಟಿ ರೂ., 2024–25ರಲ್ಲಿ 896 ಕುಟುಂಬಗಳಿಗೆ 44.8 ಕೋಟಿ ರೂ. ಮತ್ತು 2025–26ರಲ್ಲಿ (ನವೆಂಬರ್ ವರೆಗೆ) 193 ಕುಟುಂಬಗಳಿಗೆ 9.65 ಕೋಟಿ ರೂ.ಗಳನ್ನು ವಿತ–ರಿಸಿದೆ. 112 ಪ್ರಕರಣಗಳು ಇನ್ನೂ ಪರಿಶೀಲನೆಯಲ್ಲಿವೆ.

ತಾಂತ್ರಿಕ ಸಮಸ್ಯೆಗಳಿಂದಾಗಿ ಪರಿಹಾರ ಪಾವತಿ ವಿಳಂಬವಾಗಿದೆ ಎಂದು ಸರ್ಕಾರ ಹೇಳಿದ್ದು, ಒಮ್ಮೆ ಪರಿಹರಿಸಿದ ನಂತರ ಪಾವತಿಗಳನ್ನು ತ್ವ–ರಿತವಾಗಿ ಮಾಡಲಾಗುವುದು ಎಂದು ಭರವಸೆ ನೀಡಿದೆ.2023–24ರಲ್ಲಿ ವರದಿಯಾದ 1,254 ಆತ್ಮಹತ್ಯೆಗಳಲ್ಲಿ 164 ಪ್ರಕರಣಗಳನ್ನು ತಿರಸ್ಕ–ರಿಸಲಾಗಿದೆ ಮತ್ತು 1,090 ಕುಟುಂಬಗಳನ್ನು ಪರಿಹಾರಕ್ಕೆ ಅರ್ಹರೆಂದು ಪರಿಗಣಿಸಲಾಗಿದೆ. 2024–25ನೇ ಹಣಕಾಸು ವರ್ಷದಲ್ಲಿ 156 ಪ್ರಕರಣಗಳನ್ನು ತಿರಸ್ಕರಿಸಲಾಗಿದ್ದು, 1,022 ಕುಟುಂಬಗಳು ಅರ್ಹವಾಗಿವೆ. ಪ್ರಸ್ತುತ ಹಣ–ಕಾಸು ವರ್ಷದಲ್ಲಿ (2025–26) 377 ಆತ್ಮಹತ್ಯೆಗಳಲ್ಲಿ 46 ಪ್ರಕರಣಗಳನ್ನು ತಿರಸ್ಕ–ರಿಸಲಾಗಿದೆ ಮತ್ತು 310 ಕುಟುಂಬಗಳು ಪರಿಹಾರಕ್ಕೆ ಅರ್ಹವೆಂದು ಪರಿಗಣಿಸಲಾಗಿದೆ. ರೈತರ ಆತ್ಮಹತ್ಯೆಯ ವಿಷಯದಲ್ಲಿ ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರವು ದೈವಿಕ ನಿರ್ಲಕ್ಷ್ಯವನ್ನು ಹೊಂದಿದೆ ಎಂದು ಬಿಜೆಪಿ ರಾಜ್ಯ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದರು. ರೈತರ ಸಂಕಷ್ಟವನ್ನು ಪರಿಹರಿಸಲು ವಿಫಲವಾಗಿರುವ ಈ ಭ್ರಷ್ಟ ಕಾಂಗ್ರೆಸ್ ಸರ್ಕಾರದ ನಿರ್ಲಕ್ಷ್ಯಕ್ಕೆ ಯಾವುದೇ ಕ್ಷಮಿಸಿಲ್ಲ. ಕಳೆದ 2.5 ವರ್ಷಗಳಲ್ಲಿ, ಕರ್ನಾಟಕವು ರೈತರ ಆತ್ಮಹತ್ಯೆಯಲ್ಲಿ ಎರಡನೇ ಸ್ಥಾನದಲ್ಲಿದೆ ಎಂದು ಅವರು ಎಕ್ ಸಮಾಡಿದ್ದಾರೆ.

## ಸ್ವಾಮಿ ವಿವೇಕಾನಂದ ಸಹಕಾರಿ ಸಂಘದ 2026 ರ ಕ್ಯಾಲೆಂಡರ್ ಬಿಡುಗಡೆ

ನೈಜ್ಯ ದೆಸೆ ನ್ಯೂಸ್

**ಕವಿತಾಳ: ಪಟ್ಟಣದ ಸ್ವಾಮಿ ವಿವೇಕಾನಂದ ಪತ್ತಿನ ಸಹಕಾರಿ ಸಂಘದ ವತಿಯಿಂದ 2026ನೇ ಸಾಲಿನ ನೂತನ ಕ್ಯಾಲೆಂಡರನ್ನು ಹೊರತಂದಿದ್ದು ಸಂಘದ ಅಧ್ಯಕ್ಷ ರಜೇಶ್ ಬನ್ನಿಗಿಡದ್ ಅವರು ಬಿಡುಗಡೆ ಮಾಡಿದರು. ನಿರ್ದೇಶಕ ಬಸವರಾಜ್ ಕಂದಗಲ್, ಜಯರಾಂ ಉಡುಪಿ, ಚನ್ನಪ್ಪ ಮತ್ತು ಸಂಘದ ಸಿಇಒ ಲಕ್ಷ್?ಮಪತಿ ಬಾಗೋಡಿ ಉಪಸ್ಥಿತರಿದ್ದರು.**



## ಜ. 14 ಮತ್ತು 15 ರಂದು ಅಂಬಿಗರ 10 ನೇ ಶರಣ ಸಂಸ್ಕೃತಿ ಉತ್ಸವ ಹಾಗೂ ವಚನ ಗ್ರಂಥ ರಥೋತ್ಸವ– ಶ್ರೀ ಶಾಂತಭೀಷ್ಮ ಚೌಡಯ್ಯ ಸ್ವಾಮೀಜಿ



ನೈಜ್ಯ ದೆಸೆ ನ್ಯೂಸ್

**ರಾಯಚೂರು: ಡಿ.16 – ಮುಂದಿನ ತಿಂಗಳು ಜ. 14 ಮತ್ತು 15 ರಂದು ಹಾವೇರಿ ಜಿಲ್ಲೆಯ ಸುಕ್ಷೇತ್ರ ನರಸಿಪುರದ ನಿಜಶರಣ ಅಂಬಿಗರ ಚೌಡಯ್ಯನವರ ಗುರುಪೀಠದಲ್ಲಿ ಅಂಬಿಗರ 10 ನೇ ಶರಣ ಸಂಸ್ಕೃತಿ ಉತ್ಸವ ಹಾಗೂ ವಚನ ಗ್ರಂಥ ಮಹಾರಥೋತ್ಸವ ನಡೆಯಲಿದೆ ಎಂದು ಗುರುಪೀಠದ ಶ್ರೀ ಶ್ರೀ ಶಾಂತಭೀಷ್ಮ ಚೌಡಯ್ಯ ಸ್ವಾಮೀಜಿ ಹೇಳಿದರು.**

ಅವರು ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿ ಶ್ರೀ ಕ್ಷೇತ್ರದಲ್ಲಿ ಎರಡು ದಿನಗಳ ಕಾಲ ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿ–ಕ ಕಾರ್ಯಕ್ರಮ ನಡೆಯಲಿದ್ದು ಅಂಬಿಗರ ಚೌಡಯ್ಯನವರ ಶಿಲಾಮಂಟಪ , ಕಂಚಿನ ಪುತ್ಥಳಿ ಲೋಕಾರ್ಪಣೆ, ಶ್ರೀ ವೇದವ್ಯಾಸರ ಕಲ್ಯಾಣ ಮಂಟಪ ಉದ್ಘಾಟನೆ , ಪ್ರತಿಭಾ ಪುರಸ್ಕಾರ, ಸಾಮೂಹಿಕ ವಿವಾಹ,ರಕ್ತದಾನ, ಗಂಗಾರತಿ, ಪೀಠಾರೋಹಣ ದಶಮಾನೋತ್ಸವ ಸೇರಿದಂತೆ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು ರಾಜ್ಯದ ಸಿಎಂ, ಡಿಸಿಎಂ, ಕೇಂದ್ರದ ಸಚಿವರು ಹಾಗೂ ರಾಜ್ಯದ ಸಚಿವರು, ರಾಜಕೀಯ ಧುರೀಣರು ಮತ್ತು ವಿವಿಧೆಡೆಯಿಂದ ಭಕ್ತರು ಆಗಮಿಸಲಿದ್ದಾರೆ ಎಂದರು. ರಾಜ್ಯ ಸರ್ಕಾರ ಗಂಗಾಮತಸ್ಥ ಸಮಾಜವನ್ನು ಎಸ್ಟಿಗೆ ಸೇರ್ಪಡೆ ಮಾಡಬೇಕೆಂದು ಒತ್ತಾಯಿಸಿದ ಅವರು ಚೌಡಯ್ಯನವರ ಐಕ್ಯ ಸ್ಥಳ ಸಂರಕ್ಷಿಸಿ ಅಭಿವೃದ್ಧಿ ಪಡಿಸಬೇಕೆಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಮುಖಂಡರಾದ ಕೆ.ಶಾಂತಪ್ಪ, ಶರಣಪ್ಪ ಕಲ್ಮಲಾ, ಕಡುಗೋಲು ಆಂಜಿನೇಯ್ಯ, ಕಡುಗೋಲು ಶರಣಪ್ಪ, ಜಂಬಣ್ಣ , ಹೊನ್ನಪ್ಪ ಇನ್ನಿತರರು ಇದ್ದರು.

## ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷರಾಗಿ ಶಿವರಾಜ್ ಕೆಂಭಾವಿ ಅವಿರೋಧ ಆಯ್ಕೆ

ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ಡಿ 17. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕ ಅಧ್ಯಕ್ಷರಾಗಿ ಶಿವರಾಜ್ ಕೆಂಭಾವಿ, ಪ್ರಧಾನ ಕಾರ್ಯದರ್ಶಿಯಾಗಿ ಗಂಗಾಧರ ನಾಯಕ ಅವಿರೋಧ ಆಯ್ಕೆಯಾಗಿದ್ದಾರೆ.**

ಲಿಂಗಸಗೂರು ಪತ್ರಿಕಾ ಭವನದಲ್ಲಿ ಸೋಮವಾರ ನಡೆದ ತಾಲೂಕು ಘಟಕದ ಚುನಾವಣಾ ಪ್ರಕ್ರಿಯೆ ನಡೆಸಲಾಯಿತು. ಉಪಾಧ್ಯಕ್ಷರಾಗಿ ಡಾ.ಶರಣಪ್ಪ ಆನೆಹೊಸೂರು, ಡಿ.ಜಿ.ಶಿವು ಪಟ್ಟಿ, ರಾಘವೇಂದ್ರ ಭಜಂತ್ರಿ, ಕಾರ್ಯದರ್ಶಿಯಾಗಿ ಶಶಿಧರ ಕಂಚಿಮಠ ಮುದಗಲ್, ಸುನಿಲ್ ಕುಮಾರ ಹಟ್ಟಿ ಹಾಗೂ ಖಜಾಂಚಿಯಾಗಿ ನಾಗರಾಜ ಮಸ್ಕಿ ಅವಿರೋಧವಾಗಿ ಆಯ್ಕೆಯಾದರು.



ಇನ್ನೂ ಕಾರ್ಯಕಾರಿ ಸಮಿತಿ ಸದಸ್ಯರಾಗಿ ಮೊಹಿನುದ್ದಿನ್ ಭಂಡಾರಿ, ಚಂದ್ರಶೇಖರ ನಾಯಕ, ನಾಗರಾಜ್ ಮಡಿವಾಳರ್ ಹನುಮಂತ ಕನ್ನಾಳ, ಅರುಣಕುಮಾರ, ರಾಜೇಶ ಮಾಣಿಕ, ಬಸವರಾಜ ಆಶೀಹಾಳ ಅವಿರೋಧವಾಗಿ ಆಯ್ಕೆಯಾದರು. ಅವಿರೋಧ ಆಯ್ಕೆ ನಡೆದ ಬಳಿಕ ಜಿಲ್ಲಾಧ್ಯಕ್ಷರಾದ ಆರ್. ಗುರುನಾಥ ಫಲಿತಾಂಶ ಪ್ರಕಟಿಸಿ ವಿಜೇತರಿಗೆ ಪ್ರಮಾಣಪತ್ರ ವಿತರಿಸಿದರು.

## ಮಲ್ಲದಗುಡ್ಡ–ಅರೂಢ ಕರಿಬಸವ ತಾತನವರ ಪುಣ್ಯಸ್ಮರಣೆ ಸಾಮೂಹಿಕ ವಿವಾಹ

ನೈಜ್ಯ ದೆಸೆ ನ್ಯೂಸ್

**ಕವಿತಾಳ: 'ಸಾಮೂಹಿಕ ವಿವಾಹದಿಂದ ಬಡ ಕುಟುಂಬಗಳಿಗೆ ಆರ್ಥಿಕ ಹೊರೆ ಕಡಿಮೆಯಾಗುತ್ತದೆ' ಎಂದು ಮಸ್ಕಿ ಶಾಸಕ ಆರ್.ಬಸನಗೌಡ ತುರವಿಹಾಳ ಹೇಳಿದರು.**

ಸಮೀಪದ ಮಲ್ಲದಗುಡ್ಡ ಗ್ರಾಮದ ಆರೂಢ ಅಯ್ಯಪ್ಪ ತಾತನವರರ 44ನೇ ಮತ್ತು ಆರೂಢ ಕರಿಬಸವಸ್ವಾಮೀ–ಜಿಯ 10ನೇ ಪುಣಗಯಸ್ಮರಣೆ ಅಂಗವಾಗಿ ಹಮ್ಮಿಕೊಂಡಿದ್ದ ಸಾಮೂಹಿಕ ವಿವಾಹ ಸಮಾರಂಭದಲ್ಲಿ ಅವರು ಮಾತನಾಡಿದರು. ಪ್ರತಿ ವರ್ಷ ಸಾಮೂಹಿಕ ವಿವಾಹ ಏರ್ಪಡಿಸಿ, ಬಡ ಕುಟುಂಬಗಳಿಗೆ ಅನುಕೂಲ ಕಲ್ಪಿಸುವುದು, ವಿವಿಧ ಕ್ಷೇತ್ರಗಳ ಸಾಧಕರನ್ನು ಗುರುತಿಸಿ, ಪುರಸ್ಕರಿಸುವ ಆರೂಢಮಠದ ಸಂಪ್ರದಾಯ ಶ್ಲಾಯಘನೀಯ' ಎಂದರು.



ಗಲಗ ಮಠದ ಗಂಗಾಧರ ತಾತನವರು, ಯರಮರಸ್‌ನ ಕಲಿಗಣನಾಥ ಸ್ವಾಮೀಜಿ, ಆರೂಢ ಅಯ್ಯಪ್ಪ ತಾತನವರು, ಅಬ್ಬಾಸ್ ಅಲೀ ತಾತನವರು ಗ್ವಾನವಾರ, ಮುಖಂಡ ಮಲ್ಲಿಕಾರ್ಜುಜ ಪಾಟೀಲ್ ಯದ್ದ ?ಲದಿನ್ನಿ, ಬಿಜೆಪಿ ಮುಖಂಡ ಪ್ರಸನ್ನ ಪಾಟೀಲ್ಮತ್ತಿತರರು ಉಪಸ್ಥಿತರಿದ್ದರು.ವಿವಾಹ ಸಮಾರಂಭದಲ್ಲಿ 11 ಜೋಡಿ ನವ ವಧು–ವರರು ದಾಂಪತ್ಯ ಜೀವನಕ್ಕೆ ಕಾಲಿಟ್ಟರು. ಭಕ್ತರಿಂದ ಆರೂಢ ಅಯ್ಯಪ್ಪ ತಾತನವರ ತುಲಾಭಾರ ನೆರವೇರಿಸಲಾಯಿತು.

# ನಗರ ಪ್ರೋಲಿಯೋ ಲಸಿಕೆ ಟಾಸ್ಕ್ಫೋರ್ಸ್ ಸಮಿತಿ ಸಭೆ 35,560 ಮಕ್ಕಳಿಗೆ ಲಸಿಕೆ ಹಾಕುವ ಗುರಿ: ಆಯುಕ್ತ ಜುಬಿನ್ ಮೊಹೊಪಾತ್ರ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಡಿಸೆಂಬರ್ 16 (ಕರ್ನಾಟಕ ವಾರ್ತೆ): ರಾಯಚೂರು ನಗರದಲ್ಲಿ ರಾಷ್ಟಿಯ ಪಲ್ಸ್ ಪೋಲಿಯೋ ಅಭಿಯಾನದಡಿ ಡಿ.21ರಿಂದ 24ರವರೆಗೆ ಐದು ವರ್ಷದೊಳಗಿನ 35,560 ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ. ಈ ಕಾರ್ಯಕ್ಕೆ ನಿಯೋಜನೆಗೊಂಡ ವೈದ್ಯರು, ಆರೋಗ್ಯ ಇಲಾಖೆ ಸಿಬ್ಬಂದಿ, ಅಂಗನವಾಡಿ ಆಶಾ ಕಾರ್ಯಕರ್ತೆಯರು ಕೆಲಸಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕೆಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹೊಪಾತ್ರ ಅವರು ಸಂಬಂಧಿಸಿ ಅಧಿಕಾರಿಗಳಿಗೆ ಸೂಚಿಸಿದರು.**

ಡಿಸೆಂಬರ್ 16ರ ಮಂಗಳವಾರ ದಂದು ನಗರದ ಹಳೆ ಜಿಲ್ಲಾಧಿಕಾರಿಗಳ ಕಚೇ–ರಿಯ ಸಭಾಂಗಣದಲ್ಲಿ ಜರುಗಿದ ಪಲ್ಸ್ ಪೋಲಿಯೋ ನಗರ ಟಾಸ್ಕ್ಫೋರ್ಸ್ ಸಮಿತಿ ಸಭೆಯ ಆಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಯಾವುದೇ ಮಗು ಲಸಿಕೆಯಿಂದ ವಂಚಿತವಾಗದಂತೆ ನೋಡಿಕೊಳ್ಳಲು ನಗರ ಪ್ರದೇಶಗಳಲ್ಲಿ ಒಟ್ಟು 143 ಲಸಿಕಾ ಕೇಂದ್ರ ಸ್ಥಾಪಿಸಲಾಗಿದೆ. 9 ಟ್ರಾಂಜಿಟ್ ಹಾಗೂ 06 ಸಂಚಾರಿ (ಮೊಬೈಲ್) ತಂಡ ರಚಿಸಲಾಗಿದೆ. ಪಲ್ಸ್ ಪೋಲಿಯೋ ಅಭಿಯಾನದಲ್ಲಿ ಒಟ್ಟು 286 ವ್ಯಾಕ್ಸಿನೇಟರ್ಸ್, 31 ಮೇಲ್ವಿಚಾರಕರಿದ್ದು, ರಾಯಚೂರು ನಗರದಲ್ಲಿ ಒಟ್ಟು 62,685 ಮನೆಗಳನ್ನು ಲಸಿಕಾ ಅಭಿಯಾನದಡಿ ಸಂದರ್ಶಿಸುವ ಗುರಿ ಹೊಂದಲಾಗಿದೆ ಎಂದು ಆಯುಕ್ತರು ತಿಳಿಸಿದರು.

ಮಕ್ಕಳಿಗೆ ಎರಡು ಹನಿ ಪೋಲಿಯೋ ಹಾಕಿಸುವ ಮೂಲಕ ಕಳೆದ 14 ವರ್ಷಗಳಿಂದ ನಮ್ಮ ದೇಶದಲ್ಲಿ ಯಾವುದೇ ಪ್ರಕರಣ ವರದಿಯಾಗಿಲ್ಲ. ಎಂಬ ಹೆಗ್ಗಳಿಕೆಯನ್ನು ನಾವು ಮುಂದುವರೆಸೋಣ ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹೊಪಾತ್ರಾ ಅವರು ಸೂಚಿಸಿದರು.

ಭಾನುವಾರದಂದು ಕುಟುಂಬದ ಸದಸ್ಯರೆಲ್ಲರೂ ಮನೆಯಲ್ಲಿ ಇರುವುದರಿಂದ ಇಂದಿನಿಂದಲೇ ನಗರಪಾಲಿಕೆಯ ತ್ಯಾಜ್ಯ ವಿಲೇವಾರಿ ವಾಹನದ ಮೂಲಕ ಮೈಕಿಂಗ್, ಪ್ರಮುಖ ಸ್ಥಳಗಳಲ್ಲಿ ಹೊರ್ಡಿಂಗ್ಸ್‌ಗಳಿಗೆ ಪ್ಲೇಕ್ಸ್ ಅಳವಡಿಕೆ ಹಾಗೂ ವಾಟ್ಸ್ ಆಪ್, ಫೇಸ್‌ಬುಕ್, ಎಕ್ಸ್ ಸೇ–ರಿದಂತೆ ಮುಂತಾದ ಸಾಮಾಜಿಕ ಜಾಲತಾಣಗಳನ್ನು ಬಳಸಿಕೊಂಡು ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ ಹಾಗೂ ಮಾರುಕಟ್ಟೆ, ಕೈಗಾರಿಕಾ ಪ್ರದೇಶ ಸೇ–ರಿದಂತೆ ಎಲ್ಲ 143 ಬೂತ್‌ಗಳಲ್ಲಿ ಮೊದಲ ದಿನವೇ ಶೇಕಡ 100 ರಷ್ಟು ಗುರಿ ಸಾಧಿಸಲು ಕಾರ್ಯಯೋಜನೆ ಹಾಕಿಕೊಳ್ಳಬೇಕೆಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ನಂದಿತಾ ಎಮ್.ಎನ್, ಪಾಲಿಕೆ ಆರೋಗ್ಯಾಧಿಕಾರಿ ಡಾ.ಮಹಮ್ಮದ್ ಶಾಕೀರ್ ಮೊಹಿಯುದ್ದಿನ್, ತಾಲೂಕಾ ಆರೋಗ್ಯಾಧಿಕಾರಿ ಡಾ.ಪ್ರಜ್ವಲ್‌ಕುಮಾರ್, ಜಿಲ್ಲಾ ಅರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್.ದಾಸಪ್ಪನವರ, ಪರಿಸರ ಅಭಿಯಂತರರು ಜಯಪಾಲ್ ರೆಡ್ಡಿ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ, ಬಿ.ಹೆಚ್.ಇ.ಓ, ಸರೋಜಾ ಕೆ, ಹಿರಿಯ ಆರೋಗ್ಯ ನೀರಿಕ್ಷಣಾಧಿಕಾರಿ ಸುರೇಶ್, ಕ್ಷೇತ್ರ ಲಸಿಕಾ ಮೇಲ್ವಿಚಾರಕ ಕೋಪ್ರೇಶ್, ಡಿ.ಡಿ.ಎಮ್ ಲೋಕೇಶ್ ಸೇರಿದಂತೆ ಪಾಲಿಕೆ ವಾಹನ ವಿಭಾಗದ ವೆಂಕಟೇಶ ಕುಲಕರ್ಣಿ ಹಾಗೂ ಪಾಲಿಕೆ ಆರೋಗ್ಯ ನಿರೀಕ್ಷಣಾಧಿಕಾರಿಗಳು ಸಭೆಯಲ್ಲಿದ್ದರು.

## ಸಾಹಿತ್ಯ ಸಿಂಚನ

ಸೇರು ಬಾ ಸಂಗಾತಿಯೆ

ನಿನ್ನ ನಗುವ ಮಿಂಚಿಗೆ
ಪ್ರೀತಿ ದೀಪ ಹತ್ತಿದೆ
ಕಣ್ಣೊಳಗೆ ಕಣ್ಣು ಸೇರಿ
ಮಾತು ಮೌನವಾಗಿದೆ

ಮಾತಿಗಿಂತ ಮೇಲು ಜಾಣೆ
ನಿನ್ನ ಮನದ ಪ್ರೀತಿಯು
ನವಿರು ಶಾಂತಿ ಸಹನೆಯೆಲ್ಲ
ನೆಲೆಸಿದಂತ ಗಂಗೆಯೆ

ದುರ್ಗೆಯಂತೆ ಧೈರ್ಯ ನಿನದು
ಸೃಜನಶೀಲ ಶಕ್ತಿಯೇ
ತಾಯಿ ಲಾಲಿ ಹಾಡಿನಂತೆ
ಮಾತಿಗಾಗಿ ಕಾಯ್ದೆವು

ಕಾಂತೆ ಏಕಾಂತದೊಳಗೆ
ಸ್ವರ್ಗ ಸುಖವ ಹೊಂದುವ
ಬಾಳ ರುಚಿಯ ಕೆಡದ ಹಾಗೆ
ಎಲ್ಲ ಅಣಿಯಗೊಳಿಸುವ

ನಿನ್ನ ಗೆಜ್ಜೆ ನಾದದಿಂದ
ಇರುವ ಜೀವ ಹಿಗ್ಗಲಿ
ಬಿಜ್ಜೆ ಬಾಳ ಬೆಳಗಲೆಮ್ಮ
ಸೇರು ಬಾ ಸಂಗಾತಿಯೆ

**ತುಳಸಿದಾಸ್ ಬಿ ಎಸ್**

## ಕೆರೆಗಳ ನಿರ್ವಹಣೆ ಕುರಿತು ಕಾರ್ಯಾಗಾರ ಹಾಗೂ ಕೈಪಿಡಿ ಬಿಡುಗಡೆ ಮತ್ತು 'ನೀರಿದ್ದರೆ ನಾಳೆ' ಕರಪತ್ರ ಅನಾವರಣಗೊಳಿಸದ ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್

❑ ನೈಜ್ಯ ದೆಸೆ ನ್ಯೂಸ್

**ಬೆಳಗಾವಿ: ಡಿ 16 ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ , ಸಣ್ಣ ನೀರಾವರಿ ಸಚಿವರಾದ ಶ್ರೀ ಎನ್.ಎಸ್. ಭೋಸರಾಜು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವರಾದ ಶ್ರೀ ಪ್ರಿಯಾಂಕ್ ಖರ್ಗೆ ಅವರೊಂದಿಗೆ ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ,**




ಸಣ್ಣ ನೀರಾವರಿ ಇಲಾಖೆಯ ಕೆರೆಗಳಿಗೆ ರಚಿಸಿರುವ ಕೆರೆ ಬಳಕೆದಾರರ ಸಂಘಗಳ ಪದಾಧಿಕಾರಿಗಳಿಗೆ ಕೆರೆಗಳ ನಿರ್ವಹಣೆ ಕುರಿತು ಕಾರ್ಯಾಗಾರ ಹಾಗೂ ಕೈಪಿಡಿ ಬಿಡುಗಡೆ ಮತ್ತು 'ನೀರಿದ್ದರೆ ನಾಳೆ' ಕರಪತ್ರ ಅನಾವರಣಗೊಳಿಸಲಾಯಿತು.

## ಡಿಸೆಂಬರ್ 18ರಂದು ವಿಕಲಚೇತನರಿಗೆ ಕ್ರೀಡಾಕೂಟ, ಸಾಂಸ್ಕೃತಿಕ ಸ್ಪರ್ಧೆ ಆಯೋಜನೆ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಡಿಸೆಂಬರ್ 16 (ಕರ್ನಾಟಕ ವಾರ್ತೆ): ಇಲ್ಲಿನ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಿಂದ ವಿಶ್ವ ವಿಕಲಚೇತನರ ದಿನಾಚರಣೆ-2025ರ ಅಂಗವಾಗಿ ಡಿಸೆಂಬರ್ 18ರ ಬೆಳಿಗ್ಗೆ 10ಗಂಟೆಗೆ ನಗರದ ಜಿಲ್ಲಾ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ಕ್ರೀಡಾಕೂಟಗಳು ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದ್ದು,**

ಜಿಲ್ಲಾ ವ್ಯಾಪ್ತಿಯ ಎಲ್ಲಾ ವಿಕಲಚೇತನರು ಈ ಕ್ರೀಡೆಗಳಲ್ಲಿ ಭಾಗವಹಿಸುವಂತೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಾದ ಶ್ರೀದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದರಪಟ್ಟಿಗೆ ಅರ್ಜಿ ಆಹ್ವಾನ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಡಿಸೆಂಬರ್ 16(ಕರ್ನಾಟಕ ವಾರ್ತೆ): ರಾಷ್ಟ್ರೀಯ ಆರೋಗ್ಯ ಅಭಿಯಾನ ಕಾರ್ಯಕ್ರಮದ ಅಡಿಯಲ್ಲಿ 2025-26ನೇ ಸಾಲಿನಲ್ಲಿ ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣ ಸಂಘದ ಜಿಲ್ಲಾ ಮಾನಸಿಕ ಆರೋಗ್ಯ ವಿಭಾಗದಿಂದ ಜಿಲ್ಲೆಯ ಮಾನಸಿಕ ರೋಗಿಗಳಿಗೆ ಮಾತ್ರೆ ಮತ್ತು ಔಷಧಿಗಳನ್ನು ಖರೀದಿಸಲು ಅರ್ಹ ಸರಬರಾಜುದಾರರು ತಮ್ಮ ಏಜೆನ್ಸಿಯ ಜಿ.ಎಸ್.ಟಿ ಕೊಟೇಶನ್‌ಗಳ ಮುಖಾಂತರ ದರಪಟ್ಟಿಗೆ ಅರ್ಜಿ ಆಹ್ವಾನಿಸಲಾಗಿದೆ.**

ಆಸಕ್ತರು ಏಜೆನ್ಸಿಗಳು ಡಿಸೆಂಬರ್ 23ರೊಳಗಾಗಿ ಜಿ.ಎಸ್.ಟಿ ಕೊಟೇಶನ್‌ಗಳನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಲಯದ ರಾಯಚೂರು ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಲಯ ವಿಭಾಗ ರಾಯಚೂರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 8151896578ಗೆ ಸಂಪರ್ಕಿಸುವಂತೆ ಅಥವಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳನ್ನು ಕಚೇರಿಯ ವೇಳೆಯಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಲಯ ವಿಭಾಗದ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## ಪ್ರಜಾಪ್ರಭುತ್ವ ಉಳಿಸಲು ಮತ ಕಳ್ಳತನ ವಿರುದ್ಧ ಹೋರಾಟ ಮುಂದುವರೆಯಲಿದೆ: ಡಿಸಿಎಂ ಡಿಕೆ ಶಿವಕುಮಾರ್

❑ ನೈಜ್ಯ ದೆಸೆ ನ್ಯೂಸ್

**ನವದೆಹಲಿ: ದೇಶದಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಉಳಿಸಲು, ಮತ ಕಳ್ಳತನ ವಿರುದ್ಧ ಕಾಂಗ್ರೆಸ್ ಆರಂಭಿಸಿರುವ ಹೋರಾಟ ಮುಂದುವರಿಯಲಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.**

ದೆಹಲಿಯ ಕರ್ನಾಟಕ ಭವನದಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಅವರು, ವೋಟ್ ಚೋರಿ ವಿರುದ್ಧ ನಡೆದ ಪ್ರತಿಭಟನೆಯಲ್ಲಿ ಜನರ ಉತ್ಸಾಹ ನೋಡಿದಾಗ ದೇಶಕ್ಕೆ ಕಾಂಗ್ರೆಸ್ ಅನಿವಾರ್ಯತೆ ಎಷ್ಟಿದೆ ಎನ್ನುವುದು ಅರ್ಥವಾಗಿದೆ. ಪಕ್ಷ ಉಳಿಸಿಕೊಳ್ಳಲು ಕಾರ್ಯಕರ್ತರು



ಸಜ್ಜಾಗಿರುವುದನ್ನು ನೋಡಿದಾಗ ನಮ್ಮ ಸ್ಥೈರ್ಯವೂ ಇಮ್ಮಡಿಯಾಗಿದೆ. 2028 ರ ವಿಧಾನಸಭಾ ಮತ್ತು 2029ರ ಲೋಕಸಭಾ ಚುನಾವಣೆಗೆ ಈಗಿನಿಂದಲೇ ಕಾರ್ಯಕರ್ತರು ಸಜ್ಜಾಗುತ್ತಿದ್ದಾರೆ ಎಂದು ಹೇಳೀದರು.

ಆಳಂದ ಕ್ಷೇತ್ರದ ಹಲವು ಗ್ರಾಮಗಳಲ್ಲಿ ನೆರೆ ರಾಜ್ಯಗಳ ಮೊಬೈಲ್ ನಂಬರ್ ಬಳಸಿ ಮತದಾರರ ಹೆಸರುಗಳನ್ನು ಅಳಿಸಿಹಾಕಿರುವುದು ಕಂಡು ಬಂದಿದೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಹೈಕಮಾಂಡ್ ವರಿಷ್ಠರನ್ನು ಭೇಟಿ ಮಾಡಿರುವ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಶಿವಕುಮಾರ್ ಅವರು, ಇದು ಸೌಹಾರ್ದಯುತ ಭೇಟಿ ಮಾತ್ರ. ಯಾವುದೇ ನಿರ್ದಿಷ್ಟ ವಿಷಯ ಕುರಿತು ಅವರೊಂದಿಗೆ ಚರ್ಚಿಸಿಲ್ಲ ಎಂದರು.

ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯ ಐದು ಪಾಲಿಕೆಗಳಿಗೆ ನಡೆಯಲಿರುವ ಚುನಾವಣೆಗೆ ಇಂದಿನಿಂದ ಅರ್ಜಿ ಸ್ವೀಕಾರ ಆರಂಭವಾಗಿದೆ. ಮೀಸಲಾತಿ ಅಂತಿಮ ಆಗಿಲ್ಲವಾದರೂ 369 ವಾರ್ಡ್ ಗಳಲ್ಲಿ ಸ್ಪರ್ಧಿಸಲು ಯಾರಿಗೆಲ್ಲ ಆಸಕ್ತಿ ಇದೆ ಎಂಬುದನ್ನು ತಿಳಿದುಕೊಳ್ಳಲು ಈ ಅರ್ಜಿ ಆಹ್ವಾನಿಸಲಾಗಿದೆ. ಸಾಮಾನ್ಯವರ್ಗಕ್ಕೆ ರೂ. 50 ಸಾವಿರ ಹಾಗೂ ಮಹಿಳೆಯರು ಹಾಗೂ ಪರಿಶಿಷ್ಟ ಸಮುದಾಯದವರಿಗೆ ರೂ. 25 ಸಾವಿರ ಶುಲ್ಕ ನಿಗದಿಪಡಿಸಲಾಗಿದೆ. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲೂ ಅವಕಾಶ ಕಲ್ಪಿಸಲಾಗಿದೆ. ಈ ಹಣವನ್ನು ಪಕ್ಷದ ಕಟ್ಟಡ ನಿಧಿಗೆ ಬಳಸಲು ತೀರ್ಮಾನಿಸಲಾಗಿದೆ ಎಂದರು.

# ಪುರೋಹಿತರ ಸಂಘದಿಂದ ನೋಟ್ ಬುಕ್ ವಿತರಣೆ




❑ ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಮಸ್ಕಿ ತಾಲೂಕಿನ ಅಖಿಲ ಭಾರತ ಅಸಂಘಟಿತ ಪುರೋಹಿತ ಕಾರ್ಮಿಕರ ಎಡರೇಷನ್ ಮಸ್ಕಿ ಘಟಕದ ವತಿಯಿಂದ ಅಭಿನಂದನ್ ಸ್ಫೂರ್ತಿ ಧಾಮದ ಮಕ್ಕಳಿಗೆ ನೂರಾರು ನೋಟು ಬುಕ್ಕುಗಳನ್ನು ವಿಚಾರಿಸಿದರು.**

ಇದೇ ಸಂದರ್ಭದಲ್ಲಿ ಮಾತನಾಡಿದ ರಾಘವೇಂದ್ರಚಾರ್ಯ ಅವರು ನಮ್ಮ ಭಾಗದಲ್ಲಿ ಅಭಿನಂದನ್ ಸ್ಫೂರ್ತಿ ಧಾಮವು ಹಲವಾರು ಮಕ್ಕಳಿಗೆ ಆಸರೆಯಾಗಿದೆ ಹಾಗೂ ಶಿಕ್ಷಣದಿಂದ ವಂಚಿತ ಮಕ್ಕಳ ಶಿಕ್ಷಣಕ್ಕೆ ಇವರು ನೀಡುತ್ತಿರುವ ಸೇವೆಯು ಮಸ್ಕಿಗೆ ಒಂದು ಮಾದರಿಯಾದ ಸೇವೆಯಾಗಿದೆ ಎಂದು ಹೇಳಿದರು. ಅಶೋಕ ಠಾಕೂರ್ ಮಾತನಾಡಿ ಅಭಿನಂದನ ಸಂಸ್ಥೆಯ ಎಲ್ಲಾ ಸೇವ ಕಾರ್ಯಗಳು ಜನಪರ ಸಮಾಜಪರ ಆಗಿದೆ ಎಂದರು ಅದಕ್ಕಾಗಿ ಈ ಆಶೀರ್ವಾದ ಮಕ್ಕಳಿಗೆ ನಮ್ಮ ಸಂಘದಿಂದ ನೋಟು ಬುಕ್ ಗಳನ್ನು ವಿಸ್ತರಿಸುತ್ತೇವೆ ಹಾಗೂ ಎಲ್ಲರೂ ತನು ಮನ ಧನದಿಂದ ಸಹಕರಿಸಬೇಕು ಎಂದರು.

ಈ ಸಂದರ್ಭದಲ್ಲಿ ಉದ್ಯಮಿಗಳಾದ ಪಿಲ್ಲಿ ರಾಮರಾವ್, ಪುರೋಹಿತ ಸಂಘದ ಅಧ್ಯಕ್ಷರಾದ ಹನುಮೇಶಾಚಾರ್ಯ, ಸಂಘಟನಾ ಕಾರ್ಯದರ್ಶಿ ವಿರನಾರಾಯಣ ಪೂಜಾರಿ ಅಭಿನಂದನ್ ಸಂಸ್ಥೆಯ ಸಂಸ್ಥಾಪಕ ರಾಮಣ್ಣ ಹಂಪರಗುಂದಿ ಹಾಗೂ ಮಕ್ಕಳು ಉಪಸ್ಥಿತರಿದ್ದರು.

# ಮಕ್ಕಳ ಪ್ರತಿಭೆ ಅನಾವರಣಕ್ಕೆ ಪ್ರತಿಭಾ ಕಾರಂಜಿ ಮುಖ್ಯ :ಸೌಮ್ಯಶ್ರೀ

❑ ನೈಜ್ಯ ದೆಸೆ ನ್ಯೂಸ್

**ಕವಿತಾಳ: ಶಾಲಾ ಮಕ್ಕಳಲ್ಲಿ ಅಡಗಿರುವ ಪ್ರತಿಭೆಯನ್ನು ಹೊರ ಹಾಕಲು ಪ್ರತಿಭಾ ಕಾರಂಜಿ ತುಂಬಾ ಮುಖ್ಯವೆಂದು ಕವಿತಾಳ ವಲಯದ ಸಂಪನ್ಮೂಲ ಅಧಿಕಾರಿ ಸೌಮ್ಯಶ್ರೀ ಹೇಳಿದರು.**

ಜಿಪಂ. ರಾಯಚೂರು ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ರಾಯಚೂರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಮಾನ್ವಿ ಕ್ಷೇತ್ರಸಮನ್ವಯಾಧಿಕಾರಿಗಳ ಕಾರ್ಯಾಲಯ ಮಾನ್ವಿ, ಸಮೂಹ ಸಂಪನ್ಮೂಲ ಕೇಂದ್ರ ಕವಿತಾಳ ಇವರ ಸಹಯೋಗದಲ್ಲಿ ನವಚೇತನ ಅನುದಾನಿತ ಪ್ರಾಥಮಿಕ ಶಾಲಾ ಅವರಣದಲ್ಲಿ ಸೋಮವಾರ ಆಯೋಜಿಸಿದ್ದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮವನ್ನು ಉದ್ದೇಶಿಸಿ ಪ್ರಾಸ್ತವಿಕವಾಗಿ ಮಾತನಾಡಿದ ಅವರು ಸಿರವಾರ ತಾಲೂಕಿನ ಕವಿತಾಳ ವಲಯದಲ್ಲಿ 28ಕ್ಕೂ ಹೆಚ್ಚು ಪ್ರಾಥಮಿಕ, ಪ್ರೌಢಶಾಲೆ, ಅನಿದಾನಿತ, ಅನುದಾನರಹಿತ ಶಾಲೆಗಳು ಒಳಗೊಂಡಿರುತ್ತವೆ.

ಹೀಗಾಗಿ ಕರ್ನಾಟಕ ಸರ್ಕಾರವೂ



2002 ಇಸ್ವಿಯಲ್ಲಿ ಪ್ರತಿಭಾ ಕಾರಂಜಿ ಕಾರ್ಯಕ್ರಮ ಜಾರಿ ಮಾಡಿದೆ. ಶಾಲಾ ಮಕ್ಕಳಿಗೆ ಪಠ್ಯದ ಜೊತೆಗೆ ಪಠ್ಯತರ ಚಟುವಟಿಕೆಗಳಾದ ಸಂಗೀತ, ಚಿತ್ರಕಲೆ, ನೃತ್ಯ ಮಿಮಿಕ್ರಿ, ಕೈಯಿಂದ ಮಾದರಿ ತಯಾರಿ,ಭಾಷಣ,ಭಾವಗೀತೆ, ಭಕ್ತಿಗೀತೆ, ದೇಶಭಕ್ತಿಗೀತೆ ಇನ್ನಿತರ ಭಾಷಾಕೌಶಲ್ಯಗಳನ್ನು ಗುರ್ತಿಸುವುದೇ ಪ್ರತಿಭಾ ಕಾರಂಜಿ ಮುಖ್ಯಉದ್ದೇಶವೆಂದು ಹೇಳಿದರು. ವಂ. ಫಾದರ್ ಆರೋಗ್ಯದಾನಿ ಕಾರ್ಯಕ್ರಮ ಅಧ್ಯಕ್ಷತೆವಹಿಸಿದ್ದರು. ಆರಿಫ್ ಮಿಯಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿರವಾರ, ಜಾವಿದ್ ಪಾಷಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸಿರವಾರ, ಮೌನೇಶ ಹಣಗಿ ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸಿರವಾರ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ಸಂದರ್ಭದಲ್ಲಿ ಚೌರಮ್ಮ ಮುಖ್ಯೋಪಾಧ್ಯಾಯನಿ ನವಚೇತನ ಅನುದಾನಿತ ಪ್ರಾಥಮಿಕ ಶಾಲೆ, ಯೇಸುಮಿತ್ರ ಎಸ್ ಸಿ ನೌಕರರ ಸಂಘದ ಅಧ್ಯಕ್ಷ ಸಿರವಾರ, ಪಪಂ. ಅಧಿಕಾರಿ ರಾಘವೇಂದ್ರ ಮುತಾಲಿಕ, ಮುಖ್ಯಗುರುಗಳಾದ ಸೋಮಶೇಖರ್ ಮಲ್ಲದಗುಡ್ಡ ಅಯ್ಯನಗೌಡ,ಅಮರೇಶ ಪಾಟೀಲ ಹಣಗಿ,ಮಲ್ಲಿಕಾರ್ಜುನ ಶಿಕ್ಷಕರಾದ ಹುಲ್ಲಪ್ಪಗಂಟಿ, ಹನುಮೇಶ ಮಡಿವಾಳ, ಸುದರ್ಶನ, ಮಹಾಂತೇಶ,ಹಾಗೂ ಕವಿತಾಳ ಸಿ ಆರ್ ಸಿ ವಲಯದ ಶಾಲಾ ಶಿಕ್ಷಕ ಶಿಕ್ಷಕಿಂಯರು ಶಾಲಾ ಮಕ್ಕಳು ಸೇರಿದಂತೆ ಇತರಿದ್ದರು.

# ಡಿಸೆಂಬರ್ ಮಾಹೆಗೆ ಪಡಿತರ ಧಾನ್ಯ ವಿತರಣೆ: ಜಿಲ್ಲಾಧಿಕಾರಿ ನಿತೀಶ್ ಕೆ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಡಿಸೆಂಬರ್ 16 (ಕರ್ನಾಟಕ ವಾರ್ತೆ): ಇಲಿನ ಜಿಲ್ಲಾ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ 2025ರ ಡಿಸೆಂಬರ್ ಮಾಹೆಗೆ ಪಡಿತರ ಧಾನ್ಯಗಳನ್ನು ವಿತರಣೆ ಮಾಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.**

ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಜಿಲ್ಲೆಯ ಕೇಂದ್ರ ವ್ಯಾಪ್ತಿಯ ಪ್ರತಿ ಅಂತ್ಯೋದಯ(ಎಎವೈ) ಪಡಿತರ ಚೀಟಿಗೆ 35 ಕೆ.ಜಿ ಸಾರವರ್ಧಿತ ಅಕ್ಕಿ ಹಾಗೂ ಕೇಂದ್ರ ವ್ಯಾಪ್ತಿಯ ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 05 ಕೆ.ಜಿ ಸಾರವರ್ಧಿತ ಅಕ್ಕಿ ಇದರ ಜೊತೆಗೆ ರಾಜ್ಯ



ಸರ್ಕಾರದ ಅನ್ನಭಾಗ್ಯ ಯೋಜನೆಯಡಿಯಲ್ಲಿ ರಾಜ್ಯ ಸರ್ಕಾರದ ಮಾರ್ಗಸೂಚಿಂಯಂತೆ ಏಕ ಸದಸ್ಯ, ದ್ವಿ ಸದಸ್ಯ ಮತ್ತು ತ್ರಿ ಸದಸ್ಯ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕಿಂತ ಹೆಚ್ಚಿನ ಸದಸ್ಯರುಳ್ಳ ಕೇಂದ್ರ & ರಾಜ್ಯ ವ್ಯಾಪ್ತಿಯ ಅಂತ್ಯೋದಯ (ಎಎವೈ) ಮತ್ತು ಪಿ.ಹೆಚ್.ಹೆಚ್(ಬಿಪಿಎಲ್) ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಹೆಚ್ಚುವರಿಯಾಗಿ 05 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದು.

ಒಂದು ರಾಷ್ಟ್ರ ಒಂದು ಪಡಿತರ ಚೀಟಿ (ಅಂತರ್ ರಾಜ್ಯ/ ಅಂತರ್ ಜಿಲ್ಲೆ) ಪೋರ್ಟೆಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ನಿಶುಲ್ಕ ದೂರವಾಣಿ ಸಂಖ್ಯೆ 1967ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಸೀಲ್ದಾರರ ಕಚೇರಿಗೆ ಅಥವಾ ಜಿಲ್ಲೆಯ ಉಪನಿರ್ದೇಶಕರ ಕಚೇರಿಗೆ ದೂರು ಸಲ್ಲಿಸಬಹುದಾಗಿದೆ.


ಈ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಈ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾವುದೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿಂಧನೂರು ತಾಲೂಕಾ ಕಾರ್ಯನಿರತ ಪತ್ರಕರ್ತರ ಸಂಘದ ಚುನಾವಣೆ, ಅಧ್ಯಕ್ಷರಾಗಿ ಶರಣಪ್ಪ ಗೋನಾಳ, ಪ್ರಧಾನ ಕಾರ್ಯದರ್ಶಿಯಾಗಿ ಅಮರೇಶ ಅಲಬನೂರು ಆಯ್ಕೆ,

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ತೀವ್ರ ಕುತೂಹಲ ಕೆರಳಿಸಿದ್ದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಸಿಂಧನೂರು ತಾಲೂಕಾ ಘಟಕಕ್ಕೆ ನಡೆದ ಚುನಾವಣೆಯಲ್ಲಿ ಡಿ.ಹೆಚ್.ಕಂಬಳಿ ಬೆಂಬಲಿತ ಬಣದ ಅಧ್ಯಕ್ಷರಾಗಿ ಶರಣಪ್ಪ ಗೋನಾಳ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಅಮರೇಶ ಅಲಬನೂರು ಆಯ್ಕೆಯಾಗಿದ್ದಾರೆ.**

ಮಂಗಳವಾರ ನಗರದ ಪತ್ರಿಕಾ ಭವನದಲ್ಲಿ ಚುನಾವಣಾ ಪ್ರಕ್ರಿಯೆ ನಡೆಯಿತು. ಅಧ್ಯಕ್ಷ ಸ್ಥಾನಕ್ಕೆ ಹಾಗೂ 7 ಕಾರ್ಯಕಾರಿ ಮಂಡಳಿ ಸ್ಥಾನಕ್ಕೆ ಮಾತ್ರ ಮತದಾನ ನಡೆಯಿತು. ಅಧ್ಯಕ್ಷ ಸ್ಥಾನಕ್ಕೆ ಶರಣಪ್ಪ ಗೋನಾಳ ಹಾಗೂ ಮಹ್ಮದ್ ಮುಸ್ತಫಾ ಸ್ಪರ್ಧಿಸಿದ್ದರು. 24 ಜನ ಸದಸ್ಯರ ಬಲದ ಸಂಘಕ್ಕೆ 23 ಜನ ಮತದಾನ ಚಲಾಯಿಸಿದರು. ಶರಣಪ್ಪ ಗೋನಾಳ 12 ಮತಗಳನ್ನು ಪಡೆದು



ಗೆಲುವು ಸಾಧಿಸಿದರೆ, ಮಹ್ಮದ್ ಮುಸ್ತಫಾ 10 ಮತಗಳನ್ನು ಪಡೆದು ಸೋಲು ಕಂಡರು. ಅದರಲ್ಲಿ ಒಂದು ಮತ ತಿರಸ್ಕೃತಗೊಂಡಿತು.

ಇನ್ನೂ ಪ್ರಧಾನ ಕಾರ್ಯದರ್ಶಿಯಾಗಿ ಅಮರೇಶ ಅಲಬನೂರು, ಉಪಾಧ್ಯಕ್ಷರಾಗಿ ಯಮನಪ್ಪ ಪವಾರ್, ದುರುಗೇಶ, ಖಜಾಂಚಿಯಾಗಿ ಚಂದ್ರಶೇಖರ ಬೆನ್ನೂರು, ಕಾರ್ಯದರ್ಶಿಯಾಗಿ ರಾಘವೇಂದ್ರ ಅವಿರೋಧವಾಗಿ ಆಯ್ಕೆಯಾದರು. ಇನ್ನೂ ಕಾರ್ಯಕಾರಿ ಸಮಿತಿ 7 ಸ್ಥಾನಕ್ಕೆ 13 ಜನ ಸ್ಪರ್ಧಿಸಿದ್ದರು. ಡಿ.ಹೆಚ್.ಕಂಬಳಿ, ಪ್ರಹ್ಲಾದ್ ಗುಡಿ, ಚನ್ನಬಸವ, ವೀರೇಶ ಗಡ್ಡಿಮಾಳ, ತಲಾ 14 ಮತಗಳನ್ನು ಪಡೆದರು. ಎಂ.ಡಿ.ಮುಸ್ತಫಾ ತುರ್ವಿಹಾಳ 19, ನವಾಬ್ ಷರೀಫ್ 15, ಬಿ.ಶಾಮಕುಮಾರ 12 ಮತಗಳನ್ನು ಪಡೆದು ಜಯಶಾಲಿಗಳಾದರು.

ಶಿವರಾಜ ಕೆ(7), ಖಾಸೀಮ್ ಸಾಬ್(8), ವೀರೇಶ ಹೊಸಳ್ಳಿ(7), ಲಚಮಪ್ಪ(7), ಪಂಪಾಪತಿ ಹೂವಿನಬಾವಿ(7), ಕನಕರಾಯ ಆನೆಗುಂದಿ(8) ಮತಗಳನ್ನು ಪಡೆದು ಸೋಲು ಕಂಡರು ಎಂದು ಚುನಾವಣೆಯ ನೇತೃತ್ವವನ್ನು ವಹಿಸಿದ್ದ ಜಿಲ್ಲಾಧ್ಯಕ್ಷ ಆರ್. ಗುರುನಾಥ ಘೋಷಣೆ ಮಾಡಿದರು. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿದ್ದಯ್ಯಸ್ವಾಮಿ, ಉಪಾಧ್ಯಕ್ಷರಾದ ಅಶೋಕ ಬೆನ್ನೂರು, ಮಹಾನಂದ, ಖಜಾಂಚಿ ಮಲ್ಲಿಕಾರ್ಜುನ ಸ್ವಾಮಿ, ಕಾರ್ಯದರ್ಶಿ ಬಸವರಾಜ ಭೋಗಾವತಿ, ಕಾರ್ಯಕಾರಿ ಸಮಿತಿ ಸದಸ್ಯರಾದ ಚಂದ್ರಶೇಖರ ಯರದಿಹಾಳ, ಲಕ್ಷ್ಮಣ್ ಕಪಗಲ್, ಲಕ್ಷ್ಮಿಕಾಂತ ಜೈನ್, ಭಾಗವಹಿಸಿ ಚುನಾವಣಾ ಪ್ರಕ್ರಿಯೆ ನಡೆಸಿಕೊಟ್ಟರು.

## ನೇಮಕಾತಿ ಪ್ರಕಟಣೆ

DECEMBER 17 RDCC ಬ್ಯಾಂಕ್ ರಾಯಚೂರು ನೇಮಕಾತಿ ರಾಯಚೂರು ಮತ್ತು ಕೊಪ್ಪಳ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ ನಿಯಮಿತ,ರಾಯಚೂರು ಇದರಲ್ಲಿ ಖಾಲಿಯಿರುವ ಅನುಚ್ಛೇದ 371(ಜೆ) ಅಡಿಯಲ್ಲಿ ಕಲ್ಯಾಣ ಕರ್ನಾಟಕ ವೃಂದದಲ್ಲಿನ ಕೆಳಕಂಡ ಗ್ರೂಪ್–"ಎ", ಗ್ರೂಪ್–"ಬಿ" ಮತ್ತು ಗ್ರೂಪ್ – "ಸಿ" ಹುದ್ದೆಗಳಿಗೆ ನೇರ ನೇಮಕಾತಿಗಾಗಿ ಮಾನ್ಯ ಸಹಕಾರ ಸಂಘಗಳ ನಿಬಂಧಕರು, ಬೆಂಗಳೂರು ಅರ್ಜಿಗಳನ್ನು ಆಹ್ವಾನಿಸಲಾಗಿದೆ. raichurdccb.com ನಲ್ಲಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಕೆಳಗೆ ಸಕ್ರಿಯ ಮತ್ತು ಮುಂಬರುವ ರಾಯಚೂರು ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ (ಖಆಅಅ ಬ್ಯಾಂಕ್ ರಾಯಚೂರು) ಖಾಲಿ ಹುದ್ದೆಯ ವಿವರಗಳನ್ನು ನೀಡಲಾಗಿದೆ. ನಿಮ್ಮ ಅರ್ಹತೆಯ ಆಧಾರದ ಮೇಲೆ ಇತ್ತೀಚಿನ RDCC ಬ್ಯಾಂಕ್ ರಾಯಚೂರು ಉದ್ಯೋಗಗಳನ್ನು ಪರಿಶೀಲಿಸಿ ಮತ್ತು ಅಧಿಕೃತ ವೆಬ್‌ಸೈಟ್ raichurdccb.com ಮೂಲಕ ಅರ್ಜಿ ಸಲ್ಲಿಸಿ ಆರ್‌ಡಿಸಿಸಿಬಿ ನೇಮಕಾತಿ ಸಂಸ್ಥೆ ರಾಯಚೂರು ಮತ್ತು ಕೊಪ್ಪಳ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ಲಿಮಿಟೆಡ್ ಪೋಸ್ಟ್ ಹೆಸರು ಖಾತೆ ವ್ಯವಸ್ಥಾಪಕ, ಸಹಾಯಕ ಖಾತೆಗಳ ಸಂಖ್ಯೆ 70 ಹುದ್ದೆಗಳು ಅರ್ಹತೆ 10ನೇ ತರಗತಿ, ಎಸ್‌ಎಸ್‌ಎಲ್‌ಸಿ, ಪದವಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 21–11–2025 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 22–ಡಿಸೆಂಬರ್–2025 ಲಿಖಿತ ಪರೀಕ್ಷೆಯ ದಿನಾಂಕ: 15ನೇ ಜನವರಿ 2026 ಅಧಿಕೃತ ವೆಬ್‌ಸೈಟ್ :raichurd-ccb.com ಕೊನೆಯ ದಿನಾಂಕ: 22–ಡಿಸೆಂಬರ್–2025


# ಅಕ್ರಮ ಕಲ್ಲಿದ್ದಲು ದಂದೆ ನಿಲ್ಲಿಸಬೇಕೆಂದು ದಲಿತ ಸೇನೆ ಮನವಿ

❏ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಡಿ 16 – ತಾಲ್ಲೂಕಿನ ವೈ.ಟಿ.ಪಿ. ಎಸ್ ಥರ್ಮಲ್ ಪವರ್ ಕಾರ್ಖಾನೆಗೆ ಸಂಬಂಧಪಟ್ಟಂತೆ ನಡೆಯುತ್ತಿರುವ ಅಕ್ರಮ ಕಲ್ಲಿದ್ದಲು ಸಾಗಾಟ ಮತ್ತು ಭಾರೀ ಭ್ರಷ್ಟಾಚಾರ ಪ್ರಕರಣದಲ್ಲಿ ಭಾಗಿಯಾಗಿರುವ ಅಧಿಕಾರಿಗಳು ಹಾಗೂ ಖಾಸಗಿ ಕಂಪನಿಯ ಇನ್‌ಚಾರ್ಜ್‌ಗಳ ವಿರುದ್ಧ ಸೂಕ್ತ ತನಿಖೆ ನಡೆಸಿ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ದಲಿತ ಸೇನೆ ಜಿಲ್ಲಾ ಸಮಿತಿ ರಾಯಚೂರು ವತಿಯಿಂದ ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ.**

ಈ ಕುರಿತು ಮಾತನಾಡಿದ ದಲಿತ ಸೇನೆ ಜಿಲ್ಲಾಧ್ಯಕ್ಷ ಮಾರುತಿ ಚಿಕ್ಕಸೂಗೂರು, ವೈಟಿಪಿಎಸ್ ಕಾರ್ಖಾನೆಯೊಳಗೆ ಬರುವ ಕಲ್ಲಿದ್ದಲು ಸಾಗಾಟದಲ್ಲಿ ಗಂಭೀರ ಅಕ್ರಮಗಳು ನಡೆಯುತ್ತಿದ್ದು, ಕಾರ್ಖಾನೆಗೆ ಬಂದ ಕಲ್ಲಿದ್ದಲು ವ್ಯಾಗನ್‌ಗಳನ್ನು ಪೂರ್ಣ ಪ್ರಮಾಣದಲ್ಲಿ ಖಾಲಿ ಮಾಡದೆ, ಅಲ್ಪ ಪ್ರಮಾಣ ಉಳಿಸಿಕೊಂಡು ಕಾರ್ಖಾನೆಯ ಹೊರಗಡೆ ತಂದು ಯರಮರಸ್ ರೈಲ್ವೇ ನಿಲ್ದಾಣದ ಬಳಿ ಸಂಪೂರ್ಣ ಖಾಲಿ ಮಾಡಿ, ಇಟಂಗಿ ಬಟ್ಟಿಗಳು ಸೇರಿದಂತೆ ಕೆಲವು ಸಣ್ಣ ಕಾರ್ಖಾನೆಗಳು ಹಾಗೂ ಅನಾಮಿಕ–



ರಿಗೆ ದಿನನಿತ್ಯ ಲಕ್ಷಾಂತರ ರೂಪಾಯಿಗಳಿಗೆ ಕಲ್ಲಿದ್ದಲು ಮಾರಾಟ ಮಾಡಲಾಗುತ್ತಿದೆ ಎಂಬ ಆರೋಪಗಳನ್ನು ಹೊರಿಸಿದರು.

ಇದೊಂದು ಸಂಘಟಿತ ದೊಡ್ಡ ದಂದೆಯಾಗಿದ್ದು, ನೂರಾರು ಕೋಟಿ ರೂಪಾಯಿಗಳ ಭ್ರಷ್ಟಾಚಾರ ನಡೆದಿರುವ ಶಂಕೆಯಿದೆ ಎಂದು ಅವರು ತಿಳಿಸಿದರು. ಈ ಅಕ್ರಮ ವ್ಯವಹಾರದಲ್ಲಿ ವೈಟಿಪಿಎಸ್‌ನ ಹಿಂದಿನ ಕಾರ್ಯನಿರ್ವಾಹಕ ನಿರ್ದೇಶಕರಾದ ಗಂಗಾಧರ (ಹಾಲಿ ಟಿ.ಡಿ., ಬೆಂಗಳೂರು), ಸೆಕ್ಯೂರಿಟಿ ಇನ್‌ಚಾರ್ಜ್ ಎಇಇ ರವೀಶ್ ಹಾಗೂ ಪವರ್‌ಮ್ಯಾಕ್ ಕಂಪನಿ ಇನ್‌ಚಾರ್ಜ್ ಸುರೇಂದ್ರ ಅವರು ಪರಸ್ಪರ ಕೈಜೋಡಿಸಿ ನೇರವಾಗಿ ಪಾಲುದಾರರಾಗಿದ್ದಾರೆ ಎಂಬ ಆರೋಪಗಳು ಈಗಾಗಲೇ ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿದ್ದು, ಪಬ್ಲಿಕ್ ಟಿವಿ ಸೇರಿದಂತೆ ಅನೇಕ ಮಾಧ್ಯಮಗಳಲ್ಲಿ ಈ ಕುರಿತು ಹಲವು ಬಾರಿ ಪ್ರಸಾರವಾಗಿರುವುದನ್ನೂ ಅವರು ಉಲ್ಲೇಖಿಸಿದರು.


ಇಂತಹ ಆರೋಪಗಳ ನಡುವೆಯೂ ಗಂಗಾಧರ ಅವರಿಗೆ ಟಿ.ಡಿ. ಹುದ್ದೆಗೆ ಮುಂಬಡ್ತಿ ನೀಡಿರುವುದು ಕಾನೂನುಬಾಹೀರ ಮತ್ತು ಅನುಮಾನಾಸ್ಪದವಾಗಿದೆ ಎಂದು ಮಾರುತಿ ಚಿಕ್ಕಸೂಗೂರು ಹೇಳಿದರು. ವೈಟಿಪಿಎಸ್ ಮತ್ತು ಆರ್‌ಟಿಪಿಎಸ್ ಥರ್ಮಲ್ ಪವರ್ ಘಟಕಗಳು ರಾಷ್ಟ್ರಮಟ್ಟದಲ್ಲಿ ಐಎಎಸ್ ಅಧಿಕಾರಿಗಳ ಆಡಳಿತ ವ್ಯಾಪ್ತಿಗೆ ಒಳಪಟ್ಟಿದ್ದರೂ, ಜಿಲ್ಲಾಮಟ್ಟದಲ್ಲಿ ಯಾವುದೇ ಅಹಿತಕರ ಘಟನೆಗಳು ಹಾಗೂ ಕುಂದುಕೊರತೆಗಳಿಗೆ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ದಂಡಾಧಿಕಾರಿಗಳೇ ನೇರ ಹೊಣೆಗಾರರಾಗುತ್ತಾರೆ. ಆದ್ದರಿಂದ ಕಲ್ಲಿದ್ದಲು ಸಾಗಾಟ, ಪವರ್‌ಮ್ಯಾಕ್ ಕಂಪನಿಗೆ ಅಕ್ರಮವಾಗಿ ಸಂದಾಯವಾಗಿರುವ ಬೊಗಸ್ ಬಿಲ್ಲುಗಳು ಹಾಗೂ ಕಾರ್ಖಾನೆಯ ನಿರ್ವಹಣೆಯಲ್ಲಿ ನಡೆದಿರುವ ಹಗರಣಗಳ ಕುರಿತು ಸಮಗ್ರ, ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ಅವರು ಆಗ್ರಹಿಸಿದರು.

ಕಾರ್ಖಾನೆಗೆ ಸಂಬಂಧಪಟ್ಟ ಎಂ.ಡಿ. ಅವರೊಂದಿಗೆ ಕೂಲಂಕಷವಾಗಿ ಚರ್ಚಿಸಿ, ಅಕ್ರಮಗಳಲ್ಲಿ ಶಾಮಿಲ್ ಆಗಿರುವ ಅಧಿಕಾರಿಗಳು ಹಾಗೂ ಕಂಪನಿ ಪ್ರತಿನಿಧಿಗಳ ವಿರುದ್ಧ ಕೂಡಲೇ ತನಿಖೆ ನಡೆಸಿ, ತಪ್ಪಿತಸ್ಥರ ಮೇಲೆ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ದಂಡ ವಿಧಿಸಬೇಕು ಎಂದು ದಲಿತ ಸೇನೆ ಜಿಲ್ಲಾ ಸಮಿತಿ ರಾಯಚೂರು ವತಿಯಿಂದ ಮಾನ್ಯ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಲಾಗಿದೆ. ಈ ಸಂದರ್ಭದಲ್ಲಿ ದಲಿತ ಸೇನೆ ರಾಜ್ಯ ಸಂಘಟನಾ ಕಾರ್ಯದರ್ಶಿ ಡಾ.ಜಾವೀದ್ ಖಾನ್, ಸುರೇಶಬಾಬು, ಬಾಬು, ಬಾವುದ್ದೀನ್ ಸೇರಿದಂತೆ ಇನ್ನಿತರರು ಇದ್ದರು

## ಮಾಜಿ ಮುಖ್ಯಮಂತ್ರಿ ಎಚ್ ಡಿ ಕುಮಾರಸ್ವಾಮಿ ಹುಟ್ಟು ಹಬ್ಬದ ಪ್ರಯುಕ್ತ ಸಿಂಧನೂರಿನ ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಾಲು, ಹಣ್ಣು, ಬ್ರೆಡ್, ವಿತರಣೆ

❏ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಸಿಂಧನೂರಿನಲ್ಲಿ ಮಾಜಿ ಮುಖ್ಯಮಂತ್ರಿ ಹಾಗೂ ಹಾಲಿ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರ ಜನ್ಮದಿನದ ಅಂಗವಾಗಿ ತಾಲೂಕು ಜೆಡಿಎಸ್ ಅಧ್ಯಕ್ಷ ಬಸವರಾಜ ನಾಡಗೌಡ ಅವರ ನೇತೃತ್ವದಲ್ಲಿ ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಾಲು, ಹಣ್ಣು, ಬ್ರೆಡ್, ವಿತರಣೆ ಮಾಡಲಾಯಿತು. ಈ ಕಾರ್ಯಕ್ರಮದಲ್ಲಿ ಸಿಂಧನೂರು ತಾಲೂಕಿನ ಜೆಡಿಎಸ್ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.



# ಎಡದಂಡೆ ನಾಳೆ ವ್ಯಾಪ್ತಿಯಲ್ಲಿ ವಿವಿಧ ಕಾಮಗಾರಿಗಳನ್ನ ವೀಕ್ಷಣೆ ಮಾಡಿ ಏಳು ದಿನಗಳಲ್ಲಿ ವರದಿ ಸಲ್ಲಿಸಲು ಹಿರಿಯ ನೀರಾವರಿ ಅಧಿಕಾರಿಗಳಿಗೆ ನೇಮಕ ಶಾಸಕ ಹಂಪನಗೌಡ ಬಾದರ್ಲಿ



❏ ನೈಜ್ಯ ದೆಸೆ ನ್ಯೂಸ್

**ಮಾನ್ಯ ಉಪಮುಖ್ಯಮಂತ್ರಿಗಳು ಹಾಗೂ ಜಲಸಂಪನ್ಮೂಲ ಇಲಾಖೆಯ ಸಚಿವರಾದ ಸನ್ಮಾನ್ಯ ಶ್ರೀ ಡಿ.ಕೆ ಶಿವಕುಮಾರ ರವರ ಸೂಚನೆ ಮೇರೆಗೆ ಇಂದು ಡಿ 16 ರಂದು ತುಂಗಭದ್ರಾ ಎಡದಂಡೆ ನಾಲೆ ವ್ಯಾಪ್ತಿಯಲ್ಲಿ ಬರುವ ಅಕ್ವಟೇಟ್‌ಗಳ ರಿಪೇರಿ, ವನ್ನೆಫ್‌ಗಳ ರಿಪೇರಿ ಹಾಗೂ ಹೊಸ ಕಟ್ಟಡಗಳ ಕಟ್ಟುವುದು,**

ಪಾಪಯ್ಯ ಸುರಂಗ ಮಾರ್ಗದ ಅಗಲೀಕರಣ ಮತ್ತು ಮುಖ್ಯ ಕಾಲುವೆಯ




ಲೈನಿಂಗ್ ಇನ್ನಿತರ ಅಭಿವೃದ್ಧಿ ಕೆಲಸಗಳನ್ನು ಕೈಗೆತ್ತಿಕೊಂಡು ಈ ಬೇಸಿಗೆಯಲ್ಲಿ ಕಾಮಗಾರಿಗಳನ್ನು ಚಾಲನೆ ಕೊಡುವ ಸಂಬಂಧ ಉನ್ನತಮಟ್ಟದ ಹಿರಿಯ ನೀರಾವರಿ ಇಲಾಖೆ, ಭೂವಿಜ್ಞಾನ ಇಲಾಖೆಯ ಅಧಿಕಾರಿಗಳಾದ1. ಶ್ರೀ ಚಂದ್ರಶೇಖರ ಸರ್ಕಾರದ ಕಾರ್ಯದರ್ಶಿ (ನಿವೃತ್ತ)2. ಮಾಧವ ಮುಖ್ಯ ಅಭಿಯಂತರರು (ನಿವೃತ್ತ) 3. ಕೆ.ಮೋಹನ್ ಮುಖ್ಯ ಅಭಿಯಂತರರು4. ಮಂಜಪ್ಪ ಎಸ್.ಹೆಚ್.ಮುಖ್ಯಅಭಿಯಂತರರು (ನಿವೃತ್ತಿ)5. ಕೆ.ಕೆ.ಹಾವರ್ಗಿ, ಟನಲ್ ತಜ್ಞರು ಕಾರ್ಯಪಾಲಕ ಅಭಿಯಂತರರು. (ನಿವೃತ್ತ)6. ಉಮೇಶ ವಿ.ಹೆಗಡೆ ಭೂವಿಜ್ಞಾನಿ ತಜ್ಞರು ಜನರಲ್ ಮ್ಯಾನೇಜರ್ (ನಿವೃತ್ತ) ಎನ್.ಎಚ್.ಪಿ.ಎಲ್.7. ಆರ್.ಕೆ. ಜಯಗೋಪಾಲ್ Geotecnical and Re-habillition ತಜ್ಞರು,8. Representative, Hatti Gold Mines,9.ಎಸ್.ಬಿ ಮಲ್ಲಿಗವಾಡ, ಅಧೀಕ್ಷಕ ಅಭಿಯಂತರರು ತುಂಗಾಭದ್ರಾ ಯೋಜನಾ ವೃತ್ತ ಮುನಿರಾಬಾದ್ರಾಜ್ಯ ಸರ್ಕಾರ ಮೇಲ್ಕಾಣಿಸಿದ 09 ಜನರ ಆಧಿಕಾರಿಗಳ ತಂಡ ನೇಮಕ ಮಾಡಿ 02 ದಿನಗಳ ಕಾಲ ಎಡದಂಡೆ ನಾಲೆಯ ವ್ಯಾಪ್ತಿಯಲ್ಲಿ ಮೇಲಿನ ಎಲ್ಲಾ ಕಾಮಗಾರಿಗಳ ವೀಕ್ಷಣೆ ಮಾಡಿ 07 ದಿನಗಳಲ್ಲಿ ವರದಿ ಸಲ್ಲಿಸಲು ಸೂಚಿಸಲಾಗಿದೆ. ಎಂದು ಹಂಪನಗೌಡ ಬಾದರ್ಲಿ ಶಾಸಕರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾಜಿ ಸಚಿವರು ಶ್ರೀ ಅಮರೇಗೌಡ ಪಾಟೀಲ್ ಬಯ್ಯಾಪೂರ 72ನೇ ಹುಟ್ಟು ಹಬ್ಬದ ಅಂಗವಾಗಿ ರೋಗಿಗಳಿಗೆ ಹಣ್ಣು ಹಂಪಲು, ಬ್ರೇಡ್ ವಿತರಣೆ

❏ ನೈಜ್ಯ ದೆಸೆ ನ್ಯೂಸ್

ಮಸ್ಕಿ: ಡಿ16 ಮಾಜಿ ಸಚಿವರು ಶ್ರೀ ಅಮರೇಗೌಡ ಪಾಟೀಲ್ ಬಯ್ಯಾಪೂರ 72ನೇ ಹುಟ್ಟು ಹಬ್ಬದ ಅಂಗವಾಗಿ ಇಂದು ಮಸ್ಕಿ ಪಟ್ಟಣದ ಸರ್ಕಾರಿ ಆರೋಗ್ಯ ಪ್ರಾಥಮಿಕ ಆಸ್ಪತ್ರೆಗೆ ಭೇಟಿ ನೀಡಿ ರೋಗಿಗಳಿಗೆ ಹಣ್ಣು ಹಂಪಲು, ಬ್ರೇಡ್ ವಿತರಣೆ ಮಾಡಲಾಯಿತು.



ಈ ಸಂದರ್ಭದಲ್ಲಿ ಮುಖಂಡರಾದ ಎಂ.ಅಮರೇಶ, ಶ್ರೀಶೈಲಪ್ಪ ಸಜ್ಜನ್, ಪಂಪನಗೌಡ ಗುಡದೂರು, ಬಸನಗೌಡ ಮುದವಾಳ, ಬಸನಗೌಡ ಮಾರಲದಿನ್ನಿ, ಕೃಷ್ಣಾ ಡಿ.ಚಿಗರಿ, ನೀಲಕಂಠಪ್ಪ ಗೋನಾಳ, ಸೂಗಪ್ಪ ಮರಳದ, ಚಾಂದ್ ಶೇಡ್ಮಿ, ಹಜರತ್ ದಿನ್ನಿಭಾವಿ, ಮಲ್ಲಪ್ಪ ಭೋವಿ, ನಾಗರಾಜ ಕೌತಳ್, ಮಲ್ಲಿಕಾರ್ಜುನ, ವೀರೇಶ ಆನೆಹೊಸರು, ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಉಪಸ್ಥಿತರಿದ್ದರು.

# ಮಾನವಿ ಜೆಡಿಎಸ್ ಪಕ್ಷದಿಂದ H D ಕುಮಾರಸ್ವಾಮಿ ರವರ ಹುಟ್ಟು ಹಬ್ಬ ಆಚರಣೆ

❏ ನೈಜ್ಯ ದೆಸೆ ನ್ಯೂಸ್

**ಮಾನವಿ: ಮಾನವಿ ತಾಲೂಕಿನ ಜೆಡಿಎಸ್ ಪಕ್ಷದ ವತಿಯಿಂದ ಇಂದು ನಗರದಲ್ಲಿ ನಾಡು ಕಂಡ ಅಪರೂಪದ ರಾಜಕಾರಣಿ, ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾಲಿ ಕೇಂದ್ರ ಸಚಿವರಾದ ಸನ್ಮಾನ್ಯ ಶ್ರೀ ಊ ಆ ಕುಮಾರಸ್ವಾಮಿ ಇವರ ಹುಟ್ಟು ಹಬ್ಬವನ್ನು ಮಾನ್ವಿ ನಗರದ ತಾಯಿ ಮಕ್ಕಳ ಆಸ್ಪತ್ರೆಯಲ್ಲಿರುವ ರೋಗಿಗಳಿಗೆ, ಅಂಧ ಮಕ್ಕಳ ಶಾಲೆಗೆ, ನೆರಳು ಅನಾಥ ಆಶ್ರಮಕ್ಕೆ ಹಣ್ಣು ಹಂಪಲು ಹಾಗೂ ಆಶ್ರಮಕ್ಕೆ ದವಸ ಧಾನ್ಯ ನೀಡಿ ಕೇಕ್ ಕಟ್ ಮಾಡುವ ಮೂಲಕ ಸನ್ಮಾನ್ಯ ಶ್ರೀ ಊ ಆ ಕುಮಾರಸ್ವಾಮಿ ಇವರ ಹುಟ್ಟು ಹಬ್ಬವನ್ನು ಆಚರಿಸಲಾಯಿತು.**

ಇದೇ ಸಂದರ್ಭದಲ್ಲಿ ಜೆಡಿಎಸ್ ಪಕ್ಷದ ರಾಜ್ಯ ಯುವ ಘಟಕದ ಉಪಾಧ್ಯಕ್ಷರಾದ




ಶ್ರೀ ರಾಜಾ ರಾಮಚಂದ್ರ ನಾಯಕ ದೊರೆ, ಜೆಡಿಎಸ್ ಪಕ್ಷದ ತಾಲೂಕು ಅಧ್ಯಕ್ಷರಾದ ಈರಣ್ಣ ಮರ್ಲಟ್ಟಿ, ಜೆಡಿಎಸ್ ನಗರ ಘಟಕದ ಅಧ್ಯಕ್ಷರಾದ ಊ ಮೌನೇಶ್ ಗೌಡ, ಜೆಡಿ–



ಎಸ್ ರೈತ ಘಟಕದ ಅಧ್ಯಕ್ಷರಾದ ಶರಣಪ್ಪ ಗೌಡ ಮದ್ಲಾಪುರ, ಪುರಸಭೆ ಸದಸ್ಯರಾದ ಬಾಷಾ ಸಾಬ್, ಶರಣಪ್ಪ ಮೇಧಾ,ಜೆಡಿಎಸ್ ಪಕ್ಷದ ಖಖ ಘಟಕದ ಅಧ್ಯಕ್ಷರಾದ ವಿಜಯ್ ನಾಯಕ ಕೊಟ್ನೆಕಲ್, ಉಸ್ಮಾನ್ ಸಾಬ್ ಮೌಲಾ ಸಾಬ್, ಲಕ್ಷ್ಮಣ ಯಾದವ್, ವೀರೇಶ್ ಉಪ್ಪಾರ, ಬಸವರಾಜ ಸ್ವಾಮಿ ಖಾಜಾ ಪಾಷಾ ಕವಿತಾಳ ಸೇರಿದಂತೆ ಪಕ್ಷದ ಮುಖಂಡರು ಕಾರ್ಯಕರ್ತರು ಉಪಸ್ಥಿತರಿದ್ದರು.

## ವಿಶ್ವ ವಿಕಲಚೇತನರ ದಿನಾಚರಣೆ ಪ್ರಯುಕ್ತ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳು

❏ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ವಿಶ್ವ ವಿಕಲಚೇತನರ ದಿನಾಚರಣೆ?2025ರ ಅಂಗವಾಗಿ ವಿಕಲಚೇತನರಿಗಾಗಿ ಕ್ರೀಡಾಕೂಟಗಳು ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.**



ಮಾನ್ಯ ಅಪರ ಜಿಲ್ಲಾಧಿಕಾರಿಗಳು ಹಾಗೂ "ವಿಶ್ವ ವಿಕಲಚೇತನರ ದಿನಾಚರಣೆ ಸಮಿತಿ" ಅಧ್ಯಕ್ಷರ ಆದೇಶದಂತೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ದಿನಾಂಕ 18–12–2025 ರಂದು ಬೆಳಿಗ್ಗೆ 10:00 ಗಂಟೆಗೆ ರಾಯಚೂರು ನಗರದ ಜಿಲ್ಲಾ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ವಿವಿಧ ಕ್ರೀಡಾ ಸ್ಪರ್ಧೆಗಳು ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಜಿಲ್ಲಾ ವ್ಯಾಪ್ತಿಯ ಎಲ್ಲಾ ವಿಕಲಚೇತನರು ಸದರಿ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೆ.ಪಿ.ಎಸ್.ವಿ.ಎಸ್. ಅಯುರ್ವೇದಿಕ್ ಮೇಡಿಕಲ್ ಕಾಲೇಜ್‌ನಲ್ಲಿ ದೃತಿಶೌರ್ಯಂ 2ಕೆ. 25–26 ಕ್ರೀಡಾಕೂಟ



❏ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ಕೆ.ಪಿ.ಎಸ್.ವಿ.ಎಸ್. ಅಯುರ್ವೇದಿಕ್ ಮೇಡಿಕಲ್ ಕಾಲೇಜ್ ಮತ್ತು ಆಸ್ಪತ್ರೆಯ ಕ್ರೀಡಾಂಗಣದಲ್ಲಿ ನಡೆದ ದೃತಿಶೌರ್ಯಂ 2ಕೆ. 25–26 ಕ್ರೀಡಾಕೂಟಕ್ಕೆ ಕ್ರೀಡಾಜ್ಯೋತಿಯನ್ನು ಬೆಳಗಿಸುವ ಮೂಲಕ ಉದ್ಘಾಟಿಸಿ ಕೆ.ಪಿ.ಎಸ್.ವಿ.ಎಸ್. ಕಾಲೇಜಿನ ಅಧ್ಯಕ್ಷರಾದ ಕಲ್ಮಠ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಆಶೀರ್ವಚನ ನೀಡಿ ವಿದ್ಯಾರ್ಥಿಗಳು ದೈಹಿಕ ಮತ್ತು ಮಾನಸಿಕವಾಗಿ ಸದೃಡವಾಗಿರುವುದಕ್ಕೆ ಕ್ರೀಡೆಗಳಲ್ಲಿ ಭಾಗವಹಿಸುವುದು ಮುಖ್ಯವಾಗಿರುತ್ತದೆ.**


ಅದ್ದರಿಂದ ಕಾಲೇಜಿನ ವಿದ್ಯಾರ್ಥಿಗಳು ಕ್ರೀಡೆಗಳಲ್ಲಿ ಭಾಗವಹಿಸುವುದು ಅಗತ್ಯ ಎಂದು ತಿಳಿಸಿದರು ಮಾನ್ವಿ ಪೊಲೀಸ್ ಠಾಣೆಯ ಪಿ.ಎಸ್.ಐ. ಅಜ್ಮೀರ್ ಕುರೇಷಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಚಾರ್ಯರಾದ ಡಾ.ಜೀವನೇಶ್ವರಯ್ಯ, ಉಪಾ ಪ್ರಾಚಾರ್ಯರಾದ ಡಾ.ಸುಮಂಗಲ ಹೆಚ್.ಎಂ., ಕಾಲೇಜಿನ ಆಡಳಿತಾಧಿಕಾರಿಗಳಾದ ವಿಶ್ವರಾಧ್ಯಸ್ವಾಮಿ, ಉಮಶಂಕರ್ ಹೆಚ್. ಸೇರಿದಂತೆ ಕಾಲೇಜಿನ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದರು.

# ಡಿ 17 ನಿವೃತ್ತ ಹಾಗೂ ಪಿಂಚಣಿ ನೌಕರರ ದಿನಾಚರಣೆ –ಗೌರವ ಸನ್ಮಾನ ಕಾರ್ಯಕ್ರಮ ಯಶಸ್ವಿಗೊಳಿಸಿ ಅಯ್ಯಪ್ಪ

❏ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಡಿ 17 ಬೆಳಿಗ್ಗೆ 10 : 30 ಕ್ಕೆ ನಗರದ ಮಿಲಾಪ ಶಾದಿ ಮಹಲ್‌ದಲ್ಲಿ ಕರ್ನಾಟಕ ರಾಜ್ಯ ನಿವೃತ್ತ ಹಾಗೂ ಪಿಂಚಣಿದಾರರ ಸಂಘ ತಾಲೂಕ ಘಟಕ ಹಾಗು ವೇದಿಕೆಯಿಂದ ನಿವೃತ್ತ ಹಾಗೂ ಪಿಂಚಣಿ ನೌಕರರ ದಿನಾಚರಣೆ ಹಾಗೂ 75 ವರ್ಷ ಮೇಲ್ಪಟ್ಟ ನಿವೃತ್ತ ನೌಕರರಿಗೆ ಗೌರವ ಸನ್ಮಾನ ಹಮ್ಮಿಕೊಳ್ಳಲಾಗಿದೆ ಯೆಂದು ಅಧ್ಯಕ್ಷ ಟಿ.ಅಯ್ಯಪ್ಪ ತಿಳಿಸಿದ್ದಾರೆ.**

ಶಾಸಕ ಹಂಪನಗೌಡ ಬಾದರ್ಲಿಯವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ ಅಧ್ಯಕ್ಷತೆಯನ್ನು ?ಲ ಕರ್ನಾಟಕ ರಾಜ್ಯ ನಿವೃತ್ತ ಹಾಗೂ



ಪಿಂಚಣಿದಾರರ ಸಂಘದ ಅಧ್ಯಕ್ಷ ಟಿ.ಅಯ್ಯಪ್ಪ ವಹಿಸುವರು ಎಮ್.ಎಲ್.ಸಿ. ಬಸನಗೌಡ ಬಾದರ್ಲಿ, ಮಾಜಿ ಸಚಿವ ಕೆ.ಓ. ಎಫ್.ಅಧ್ಯಕ್ಷ ವೆಂಕಟರಾವ್ ನಾಡಗೌಡ, ಮಾಜಿ ಸಂಸದ ಕೆ. ವಿರೂಪಾಕ್ಷಪ್ಪ, ಮಿಲಾಪ್ ಶಾದಿಮಹಲ್ ಅಧ್ಯಕ್ಷ ಕೆ. ಜಿಲಾನಿ ಪಾಷಾ, ತಹಶೀಲ್ದಾರ ಅರುಣಕುಮಾರ ದೇಸಾಯಿ, ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ, ನಗರಸಭೆ ಪೌರಾಯುಕ್ತ ಪಾಂಡುರಂಗ ಇಟಗಿ, ಕ್ಷೇತ್ರ ಶಿಕ್ಷಣಾಧಿಕಾರಿ ಬಸಲಿಂಗಪ್ಪ ಹುಡೇದ, ಉಪಖಜಾನೆ ಅಧಿಕಾರಿ ನಾಗರಾಜ್, ಡಿವೈಎಸ್‌ಪಿ ಚಂದ್ರಶೇಖರ ನಾಯಕ, ಎಸ್.ಬಿ.ಐ. ಮುಖ್ಯ ಶಾಖೆಯ ಮುಖ್ಯ ವ್ಯವಸ್ಥಾಪಕ, ಅಮೂಲ್ ಲೋಕಡಾ, ಕೆನರಾ ಬ್ಯಾಂಕ್ ವ್ಯವಸ್ಥಾಪಕ ಜೆ.ಬಾಬುರಾವ ಹಾಗೂ ಶ್ರೀ ಬಸವಶ್ರೀ ನೌಕರರ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಶಂಕರಗೌಡ ಎಸ್. ಪಾಟೀಲ್ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು ನಿವೃತ್ತ ನೌಕರರ ಸಂಘದ ಸರ್ವ ಸದಸ್ಯರು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕಾಗಿ ಪ್ರಧಾನ ಕಾರ್ಯದರ್ಶಿ ವೆಂಕಟರೆಡ್ಡಿ ಪ್ರಚಾರ ಸಮಿತಿ ಸಂಚಾಲಕರಾದ ಬೀರಪ್ಪ ಶಂಭೋಜಿ ಮನವಿ ಮಾಡಿಕೊಂಡಿದ್ದಾರೆ.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### MD (ಯುನಾನಿ) ಇಲ್ಮುಲ್ ಕಬಲಾತ್ ವಾ ಅಮ್ರೇಜ್ ನಿಸ್ವಾನ್

ಇಲ್ಮುಲ್ ಕಬಲತ್ ವ ಅಮ್ರಾಜೆ ನಿಸ್ವಾನ್ (ಪ್ರಸೂತಿ ಮತ್ತು ಸ್ತ್ರೀರೋಗ ಶಾಸ್ತ್ರ ಒಆ (Unani) in Ilmul Qabalat wa Amraze Niswan (Obstetrics & Gynaecology)) ದಲ್ಲಿ ಪಿಜಿ ಯುನಾನಿ ವೈದ್ಯಕೀಯದಲ್ಲಿ ಮಹಿಳೆಯರ ಸಂತಾನೋತ್ಪತ್ತಿ ಆರೋಗ್ಯದ ಮೇಲೆ ಕೇಂದ್ರೀಕರಿಸಿದ ಸ್ನಾತಕೋತ್ತರ ಕೋರ್ಸ್ ಆಗಿದೆ. ಇದು ಪ್ರಸೂತಿ ಮತ್ತು ಸ್ತ್ರೀರೋಗ ಶಾಸ್ತ್ರದ ವಿಶೇಷತೆಗೆ ಸೇರಿದೆ. ಈ ಕೋರ್ಸ್ ಸಾಮಾನ್ಯವಾಗಿ 3 ವರ್ಷಗಳ ಕಾಲ ಇರುತ್ತದೆ ಮತ್ತು ಗರ್ಭಧಾರಣೆ, ಹೆರಿಗೆ ಮತ್ತು ಸ್ತ್ರೀ ಸಂತಾನೋತ್ಪತ್ತಿ ಅಸ್ವಸ್ಥತೆಗಳಿಗೆ ಸಂಬಂಧಿಸಿದ ಪರಿಸ್ಥಿತಿಗಳನ್ನು ಪತ್ತೆಹಚ್ಚುವುದು, ಚಿಕಿತ್ಸೆ ನೀಡುವುದು ಮತ್ತು ನಿರ್ವಹಿಸುವಲ್ಲಿ ಸಮಗ್ರ ತರಬೇತಿಯನ್ನು ಒಳಗೊಂಡಿದೆ. ತಾಯಿಯ ಮತ್ತು ನವಜಾತ ಶಿಶುವಿನ ಆರೈಕೆ, ಮುಟ್ಟಿನ ಅಸ್ವಸ್ಥತೆಗಳು, ಬಂಜೆತನ ಮತ್ತು ಇತರ ಸ್ತ್ರೀರೋಗ ಸಮಸ್ಯೆಗಳಿಗೆ ವಿದ್ಯಾರ್ಥಿಗಳು ಗಮನಹರಿಸುತ್ತಾರೆ. ಇದು ಯುನಾನಿ ವೈದ್ಯಕೀಯದ ಮಹಿಳಾ ಆರೋಗ್ಯಕ್ಕೆ ಸಂಬಂಧಿಸಿದ ಪೋಸ್ಟ್‌ಗ್ರಾಜುಯೇಟ್ ಸ್ಪೆಷಲೈಸೇಶನ್ ಆಗಿದ್ದು, ಗರ್ಭಧಾರಣೆ, ಪ್ರಸವ, ಮತ್ತು ಮಹಿಳಾ ರೋಗಗಳ ಚಿಕಿತ್ಸೆಗೆ ಕೇಂದ್ರೀಕೃತವಾಗಿದೆ. ಮಹಿಳೆಯರ ಪುನರುತ್ಪಾದನಾ ಆರೋಗ್ಯದ ಬಗ್ಗೆ ಆಳವಾದ ಜ್ಞಾನ, ಯುನಾನಿ ತತ್ವಗಳ ಮೂಲಕ ಗರ್ಭಪೂರ್ವ, ಗರ್ಭಾವಧಿ ಮತ್ತು ಗರ್ಭೋತ್ತರ ಚಿಕಿತ್ಸೆ, ಔಷಧೀಯ ಮತ್ತು ರೆಜಿಮೆನಲ್ ಚಿಕಿತ್ಸೆಯ ಸಂಯೋಜನೆ ಇಲ್ಮುಲ್ ಕಬಾಲತ್ ವ ಅಂರಾಝ್ ನಿಸ್ವಾನ್ ಯುನಾನಿ ವೈದ್ಯಕೀಯದ ಮಹಿಳಾ ಆರೋಗ್ಯಕ್ಕೆ ಸಂಬಂಧಿಸಿದ ಪ್ರಮುಖ ವಿಶೇಷ ಶಾಖೆ. ಗರ್ಭಧಾರಣೆ (Pregnancy), ಪ್ರಸವ (Labour), ಪ್ರಸವೋತ್ತರ ಆರೈಕೆ, ಮಹಿಳಾ ರೋಗಗಳ ನಿರ್ಣಯ ಮತ್ತು ಚಿಕಿತ್ಸೆ, ಯುನಾನಿ ತತ್ತ್ವ ಮತ್ತು ಆಧುನಿಕ ವೈದ್ಯಕೀಯ ಜ್ಞಾನ ಎರಡನ್ನೂ ಕಲಿಸಲಾಗುತ್ತದೆ. ಅರ್ಹತೆ : BUMS (Bachelor of Unani Medicine & Surgery), ಮಾನ್ಯತೆ ಪಡೆದ ಕಾಲೇಜು/ವಿಶ್ವವಿದ್ಯಾಲಯ, 1 ವರ್ಷದ ಕಡ್ಡಾಯ ಇಂಟರ್ನ್‌ಶಿಪ್ ಪೂರ್ಣಗೊಳಿಸಿರಬೇಕು, ಪ್ರವೇಶ ಸಾಮಾನ್ಯವಾಗಿ AIAPGET ಮೂಲಕ ಇಲ್ಮುಲ್ ಕಬಲತ್ ವ ಅಮ್ರಾಜೆ ನಿಸ್ವಾನ್ ವಿಭಾಗವನ್ನು 2004 ರಲ್ಲಿ ಪ್ರಾರಂಭಿಸಲಾಯಿತು. ಅಧ್ಯಾಪಕ ಸದಸ್ಯರು ಒಬ್ಬ ಓದುಗರು ಮತ್ತು ಮೂವರು ಉಪನ್ಯಾಸಕರು. ವಿದ್ಯಾರ್ಥಿಗಳಿಗೆ ಜ್ಞಾನ ಮತ್ತು ಕೌಶಲ್ಯಗಳನ್ನು ನೀಡಲು ವಿವಿಧ ಬೋಧನೆ ಮತ್ತು ಕಲಿಕೆಯ ತಂತ್ರಗಳನ್ನು ಬಳಸಿಕೊಳ್ಳಲಾಗುತ್ತದೆ. ಸಂವಹನ ಕೌಶಲ್ಯ ಮತ್ತು ವಿಷಯದ ಉತ್ತಮ ತಿಳುವಳಿಕೆಯನ್ನು ಹೆಚ್ಚಿಸಲು ವಿಭಾಗವು ನಿಯಮಿತವಾಗಿ ಜರ್ನಲ್ ಕ್ಲಬ್‌ಗಳು, ಸೆಮಿನಾರ್‌ಗಳು, ವಿಚಾರ ಸಂಕಿರಣಗಳು, ಪ್ರಕರಣ ಚರ್ಚೆಗಳು ಮತ್ತು ಪ್ರಾತ್ಯಕ್ಷಿಕೆಗಳನ್ನು ನಡೆಸುತ್ತದೆ. ಇಲ್ಲಿಯವರೆಗೆ, ಶೈಕ್ಷಣಿಕ ವೇದಿಕೆಯಲ್ಲಿ ವಿಭಾಗವು ಸ್ನಾತಕೋತ್ತರ ಪದವಿಯನ್ನು ಪಡೆದ 36 ಸಂಶೋಧನಾ ವಿದ್ವಾಂಸರನ್ನು ಅನುಮೋದಿಸಿದೆ.ಇಲಾಖೆಯ ಮೂಲಸೌಕರ್ಯವು ಎಲ್ಲಾ ಆಧುನಿಕ ಸೌಲಭ್ಯಗಳೊಂದಿಗೆ ಉತ್ತಮವಾಗಿ ಸಜ್ಜುಗೊಂಡಿದೆ. ಪ್ರಸ್ತುತ ವಿಭಾಗವು ಆಸ್ಪತ್ರೆಯಲ್ಲಿ ಪ್ರತ್ಯೇಕ ಪ್ರಸೂತಿ ಮತ್ತು ಸ್ತ್ರೀರೋಗ ಶಾಸ್ತ್ರ ಘಟಕ ಮತ್ತು ಸುಸಜ್ಜಿತ ಹೆರಿಗೆ ಕೊಠಡಿಯನ್ನು ಹೊಂದಿದೆ. ರೋಗಿಗಳ ಆರೈಕೆಗಾಗಿ ನಾವು ಒದಗಿಸುವ ಸೇವೆಗಳಲ್ಲಿ ಇವು ಸೇರಿವೆ: 1. ಸಣ್ಣ OBG ಕಾರ್ಯವಿಧಾನಗಳು,ಕುಟುಂಬ ಯೋಜನೆ ಸೇವೆಗಳು, ಸಾಮಾನ್ಯ ಹೆರಿಗೆಯನ್ನು ನಡೆಸುವುದು, ಬಂಜೆತನ ನಿರ್ವಹಣೆ, ಪ್ರಸವಪೂರ್ವ ಮತ್ತು ಪ್ರಸವಪೂರ್ವ ಆರೈಕೆ.

### ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಾರ್ಡ್ ಹೊಂದಿರುವ ಕಾರ್ಮಿಕರ ಮಕ್ಕಳಿಗೆ 2025–26 ಶೈಕ್ಷಣಿಕ ಪ್ರೋತ್ಸಾಹಧನಕ್ಕಾಗಿ ಅರ್ಜಿ ಆಹ್ವಾನ

❑ ನೈಜ್ಯ ದೆಸೆ ನ್ಯೂಸ್

**ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ, ಕಾರ್ಮಿಕ ಇಲಾಖೆ ಬೆಂಗಳೂರು ರವರಿಂದ ಕಾರ್ಮಿಕ ಕಲ್ಯಾಣ ಮಂಡಳಿಗೆ ವಂತಿಗೆ ಪಾವತಿಸುವ ಸಂಘಟಿತ ಕಾರ್ಮಿಕರ ಮಕ್ಕಳಿಂದ ಮತ್ತು ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಾರ್ಡ್ ಹೊಂದಿರುವ ಕಾರ್ಮಿಕರ ಮಕ್ಕಳಿಂದ 2025–26 ಶೈಕ್ಷಣಿಕ ಪ್ರೋತ್ಸಾಹಧನಕ್ಕಾಗಿ ಆನ್‌ಲೈನ್ ಮುಖಾಂತರ ಖಖಕ ಪೋರ್ಟಲನಲ್ಲಿ ಅರ್ಜಿ ಸಲ್ಲಿಸಲು ಆಹ್ವಾನಿಸಿದ್ದಾರೆ.**

ಪ್ರಯುಕ್ತ ಜಿಲ್ಲೆಯ ಎಲ್ಲಾ ಸರಕಾರಿ, ಅನುದಾನಿತ ಮತ್ತು ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಅರ್ಹ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಈ ಮೂಲಕ ಸೂಚಿಸಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 31.12.2025 ಹೆಚ್ಚಿನ ಮಾಹಿತಿಗಾಗಿ ಕಾರ್ಮಿಕ ಇಲಾಖೆಯ ದೂರವಾಣಿ ಸಂಖ್ಯೆ 080–23475188, 8277291175, 8277120505, 91416025621. ಸಂಪರ್ಕಿಸಬಹುದ.

### ರಾಜ್ಯದಲ್ಲಿ 1,689 ಶಾಲಾ, ಕಾಲೇಜು ಆಸ್ತಿಗೆ ಖಾತೆ ಇಲ್ಲ :ಮಧು ಬಂಗಾರಪ್ಪ

❑ ನೈಜ್ಯ ದೆಸೆ ನ್ಯೂಸ್

**ಬೆಳಗಾವಿ: ರಾಜ್ಯದಲ್ಲಿನ 1,689 ಸರ್ಕಾರಿ ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳ ಕಟ್ಟಡಗಳು ಆಯಾ ಶಾಲೆ–ಕಾಲೇಜುಗಳ ಹೆಸರಿಗೆ ಖಾತೆಯೇ ಆಗಿಲ್ಲ. ವಿಧಾನಪರಿಷತ್‌ನಲ್ಲಿ ಜೆಡಿಎಸ್‌ನ ಕೆ.ವಿವೇಕಾನಂದ ಅವರ ಪ್ರಶ್ನೆಗೆ ಉತ್ತರ ನೀಡಿರುವ ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು, 4,872 ಪ್ರೌಢಶಾಲೆಗಳಲ್ಲಿ 3,437 ಕಟ್ಟಡಗಳು ಖಾತೆಯಾಗಿವೆ.**



1,435 ಆಗಬೇಕಿದೆ. 1,319 ಪದವಿಪೂರ್ವ ಕಾಲೇಜುಗಳಲ್ಲಿ 1,055 ಖಾತೆಯಾಗಿವೆ. 264 ಖಾತೆ ಆಗಿಲ್ಲ ಎಂದು ಮಾಹಿತಿ ನೀಡಿದ್ದಾರೆ. ಸರ್ಕಾರ ಶಾಲಾ ಆಸ್ತಿಗಳ ಸಂರಕ್ಷಣೆಗಾಗಿ ಕಂದಾಯ, ಗ್ರಾಮೀಣಾಭಿವೃದ್ಧಿ, ಪೌರಾಡಳಿತ ಇಲಾಖೆಗಳ ಸಹಯೋಗದಲ್ಲಿ 2022–23ನೇ ಸಾಲಿನಿಂದ ಪ್ರತಿ ವರ್ಷ ಶಾಲಾ–ಕಾಲೇಜು ಆಸ್ತಿ ಸಂರಕ್ಷಣಾ ಆಂದೋಲನ ನಡೆಸಲಾಗುತ್ತಿದೆ. ಉಳಿದ ಎಲ್ಲ ಆಸ್ತಿಯನ್ನೂ ಹಂತ ಹಂತವಾಗಿ ಖಾತೆ ಮಾಡಲು ಕ್ರಮವಹಿಸಲಾಗುತ್ತದೆ ಎಂದು ಹೇಳಿದ್ದಾರೆ.

# ನರೇಗಾ ಕೂಲಿ ಕಾರ್ಮಿಕರಿಗಾಗಿ ಉಚಿತ ಆರೋಗ್ಯ ಶಿಬಿರ

❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಡಿ 16 – ತಾಲೂಕಿನ ಚಿಕಲಪರ್ವಿ ಗ್ರಾಮದಲ್ಲಿ ತಾಲೂಕು ಪಂಚಾಯಿತಿ ,ಮದ್ಲಾಪುರ್ ಗ್ರಾಮ ಪಂಚಾಯತಿ ಹಾಗೂ ಆರೋಗ್ಯ ಇಲಾಖೆ ಸಹಯೋಗದಲ್ಲಿ ನಾಲಾ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ ನರೇಗಾ ಕೂಲಿ ಕಾರ್ಮಿಕರಿಗಾಗಿ ಅಯೋಜಿಸಲಾದ ಉಚಿತ ಆರೋಗ್ಯ ಶಿಬಿರ ಅಭಿಯಾನಕ್ಕೆ ಸಮುದಾಯ ಆರೋಗ್ಯ ಅಧಿಕಾರಿ ಪಾಂಡುರಂಗ ಚಾಲನೆ ನೀಡಿ ಮಾತನಾಡಿ ವಾತಾವರಣದಲ್ಲಿ ಚಳಿ ಹೆಚ್ಚಾಗಿರುವುದ–ರಿಂದ ಕೂಲಿ ಕಾರ್ಮಿಕರು ಆರೋಗ್ಯದ ಬಗ್ಗೆ ಹೆಚ್ಚು ಕಾಳಜಿ ವಹಿಸುವುದು ಅಗತ್ಯವಾಗಿದೆ ಪ್ರತಿಯೊಬ್ಬರು ಕೂಡ ಬಿಸಿ ನೀರನ್ನು ಕುಡಿಯಬೇಕು ಜ್ವರ, ಕೆಮ್ಮು,ಕಫ,ನೆಗಡಿಯಂತಹ ಲಕ್ಷಣಗಳು ಕಂಡು ಬಂದಲ್ಲಿ ಹತ್ತಿರದ ಪ್ರಾಥ–ಮಿಕ ಆರೋಗ್ಯ ಕೇಂದ್ರದಲ್ಲಿನ ವೈದ್ಯರಿಂದ ಆರೋಗ್ಯ ತಾಪಸಣೆ ಮಾಡಿಸಿಕೊಂಡು ಅಗತ್ಯ ಚಿಕಿತ್ಸೆಯನ್ನು ಪಡೆಯಬೇಕು ಎಂದು ತಿಳಿಸಿದರು.**



ತಾಲೂಕ ಐ.ಇ.ಸಿ. ಸಂಯೋಜ–ಕರಾದ ಈರೇಶ ಮಾತನಾಡಿ ನರೇಗಾ ಯೋಜನೆಯಡಿಯಲ್ಲಿ ಕೂಲಿ ಕಾರ್ಮಿಕ–ರಿಗೆ ದಿನದ ಕೂಲಿದರವನ್ನು ಗಂಡು ಮತ್ತು ಹೆಣ್ಣು ಮಕ್ಕಳಿಗೆ ಸಮಾನವಾಗಿ 370 ರೂಗೆ ಹೆಚ್ಚಿಸಲಾಗಿದೆ. ವಲಸೆ ಯಾಕ್ರಿ ನಿಮ್ಮೂರಲ್ಲೆ ಉದ್ಯೋಗ ಖಾತರಿ ಹಾಗೂ ಸ್ತ್ರೀ ಚೇತನ ಅಭಿಯಾನದಡಿ ಗ್ರಾಮೀಣ ಪ್ರದೇಶದ ಪ್ರತಿ ಅರ್ಹ ಕುಟುಂಬಕ್ಕೂ ಒಂದು ಅರ್ಥಿಕ ವರ್ಷದಲ್ಲಿ 100 ದಿನ ಕೂಲಿ ಕೆಲಸವನ್ನು ಅವರ ಗ್ರಾಮ ವ್ಯಾಪ್ತಿಯಲ್ಲಿಯೇ ನೀಡಲಾಗುವುದು ಒಂದು ಕುಟುಂಬವು ವರ್ಷದಲ್ಲಿ ನೂರು ದಿನ ಕೆಲಸವನ್ನು ಮಾಡುವ ಮೂಲಕ 37 ಸಾವಿರರೂಗಳ ಕೂಲಿಯ ಹಣವನ್ನು ಪಡೆದುಕೊಳ್ಳಬಹುದಾಗಿದೆ.

ಸಾಮಾಜಿಕ ಭದ್ರತೆ ಕಲ್ಪಿಸಲು ನರೇಗಾ ಯೋಜನೆಯಡಿಯಲ್ಲಿ 65 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಹಾಗೂ ವಿಶೇಷ ಚೇತನರಿಗೆ, ಗರ್ಭಿಣಿ ಮಹಿಳೆಯರಿಗೆ ಶೇ 50ರಷ್ಟು ಕೆಲಸ ಮಾಡಿದರೂ ಕೂಡ ಪೂರ್ತಿ ಪ್ರಮಾಣದ ಕೂಲಿಯನ್ನು ನೀಡಲಾಗುವುದು ,ಕೂಲಿ ಕಾರ್ಮಿಕರ 3 ವರ್ಷದೊಳಗಿನ ಮಕ್ಕಳನ್ನು ನೋಡಿಕೊಳ್ಳುವುದಕ್ಕೆ ಶಿಶು ಪಾಲನಾ ಕೇಂದ್ರದ ವ್ಯವಸ್ಥೆಯನ್ನು ಕೂಡ ಮಾಡಲಾಗಿದೆ .ನರೇಗಾ ಕೂಲಿ ಕಾರ್ಮಿಕರು ಎನ್.ಎಂ.ಎಂ.ಎಸ್ ಹಾಜರಾತಿಯನ್ನು ಎರಡು ಬಾರಿ ಕಡ್ಡಾಯವಾಗಿ ನೀಡಬೇಕು ಎಂದು ತಿಳಿಸಿದರು.

ನರೇಗಾ ಕೂಲಿ ಕಾರ್ಮಿಕರಿಗೆ ಆರೋಗ್ಯ ಶಿಬಿರದಲ್ಲಿ ರಕ್ತದೊತ್ತಡ, ಮಧುಮೇಹ, ಕಫ ಪರೀಕ್ಷೆ ಸೇರಿದಂತೆ ಅಗತ್ಯ ವೈದ್ಯಕೀಯ ಪರೀಕ್ಷೆಗಳನ್ನು ಉಚಿತವಾಗಿ ನಡೆಸಲಾಯಿತು ಹಾಗೂ ಮಾತ್ರೆಗಳನ್ನು ವಿತರಿಸಲಾಯಿತು. ಪ್ರಧಾನ ಮಂತ್ರಿ ಭೀಮಾ ಸುರಕ್ಷಾ ಯೋಜನೆ ಮತ್ತು ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಯೋಜನೆ ಬಗ್ಗೆ ಮಾಹಿತಿ ನೀಡಲಾಯಿತು, ಕಾರ್ಯಕ್ರಮದಲ್ಲಿ ಸಮುದಾಯ ಸುರಕ್ಷಾಧಿಕಾರಿ ಮಂಜುಳಾ, ಆರೋಗ್ಯ ನಿರಕ್ಷಣಾಧಿಕಾರಿ ಚಿದಾನಂದಪ್ಪ ಬಿ.ಎಫ್.ಟಿ. ಮಹಮ್ಮದ್‌ಸಾಬ್ , ಫಾತಿಮಾ ,ಆಶಾ ಕಾರ್ಯಕರ್ತೆಯರು ಹಾಗೂ ಕೂಲಿ ಕಾರ್ಮಿಕರು ಭಾಗವಹಿಸಿದರು.

# ಶಿಕ್ಷಣ ಇಲಾಖೆ ಯಡವಟ್ಟು ಶಾಲೆ ಕಟ್ಟಡ ನೆಲಸಮ,ಅಂಗನವಾಡಿ ಕಟ್ಟಡ ಆರಂಭ ಎಸ್ಡಿಎಮ್ಸಿ ಆರೋಪ



❑ ನೈಜ್ಯ ದೆಸೆ ನ್ಯೂಸ್

**ಕವಿತಾಳ: ಡಿ 16 – ಮಸ್ಕಿ ತಾಲ್ಲೂಕಿನ** ಹಾಲಾಪೂರ ಗ್ರಾಮ ಪಂಚಾಯತಿ ವ್ಯಾಪ್ತಿಯ ಜಂಗಮರಹಳ್ಳಿ ಶಾಲೆಯ ಹಳೆ ಕಟ್ಟಡ **ನೆಲಸಮ ಮಾಡಿ ಅದೇ ಜಾಗದಲ್ಲಿ ಹೊಸದಾಗಿ ಅಂಗನವಾಡಿ ಕಟ್ಟಡ ಆರಂಭ ಮಾಡಿದ್ದು ಅದಕ್ಕೆ ಶಾಲಾ ಎಸ್ ಡಿ ಎಮ್ ಸಿ ಅದ್ಯಕ್ಷ ತಿರುಪತಿ ಯವರು ಆರೋಪ ಮಾಡಿದ್ದಾರೆ,ಹಳೆ ಕಟ್ಟಡ ನೆಲಸಮ ಮಾಡಬೇಕಾದರೆ ಲೋಕೋಪಯೋಗಿ ಇಲಾಖೆಯ ಅನುಮತಿ, ಹಾಗೆ ಶಾಲೆಯ ಎಸ್ ಡಿ ಎಮ್ ಸಿ ಪದಾಧಿಕಾರಿಗಳು ಮತ್ತು ಮುಖ್ಯಗುರುಗಳ ಅನುಮತಿ ಬೇಕು.**

ಇಷ್ಟೆಲ್ಲ ನಿಯಮಗಳನ್ನು ಗಾಳಿಗೆ ತೂರಿ ಏಕಾಏಕಿ ಬರಿ ಪಿಡಿಒ, ಸದಸ್ಯರು, ಸಿ ಆರ್ ಪಿ ಅವರಿಗೆ ಮೌಖಿವಾಗಿ ಹೇಳಿದಿವಿ,ಮಾತಾಡಿದಿವಿ ಎಂಬ ಉಂಬತನದಿಂದ ಹಳೆ ಶಾಲಾ ಕಟ್ಟಡ ನೆಲಸಮ ಮಾಡಿ ಇವಾಗ ಅಂಗನವಾಡಿ ಕಟ್ಟಡ ಆರಂಭ ಮಾಡಿದ್ದು ಯಾವ ನಿಯಮ,ಲಿಖಿತವಾಗಿ ಒಂದು ಪರವಾನಗಿ ಪತ್ರ ಯಾರು ಹತ್ತಿರ ಇಲ್ಲ ಇದು ಶಿಕ್ಷಣ ಇಲಾಖೆಯ ಯಡವಟ್ಟು,ಈ ಬಗ್ಗೆ ಕ್ಷೇತ್ರ ಶಿಕ್ಷಾಧಿಕಾರಿಗಳು ಮಾನ್ವಿ, ಸ್ಥಳೀಯ ಸಿ ಆರ್ ಪಿ ಪ್ರಶಾಂತಗೌಡ ಅವರಿಗೆ ತಮ್ಮ ವ್ಯಾಪ್ತಿಯಲ್ಲಿ ಬರುವ ಶಾಲೆಗಳ ಬಗ್ಗೆ ಮಾಹಿತಿ ಇಲ್ಲ ಇಂತಹ ನಿರ್ಲಕ್ಷ್ಯ ಅಧಿಕಾರಿಗಳು ಏಕೆಬೇಕು.

ಹಾಗೆ ಜೆಇ ವೆಂಕಟೇಶ ಸಹ ಶಾಲೆಗೆ ಮಾಹಿತಿ ತಿಳಿಸದೆ ತಮ್ಮ ಆಸ್ತಿಯಂತೆ ಶಾಲಾ ಕಟ್ಟಡ ನೆಲಸಮ ಮಾಡಿ ಅಂಗನವಾಡಿ ಕಟ್ಟಡ ಆರಂಬಿಸಿದ್ದು,ಈ ಬಗ್ಗೆ ಮಾಹಿತಿ ಸಂಬಂಧ ಕರೆ ಮಾಡಿದರೆ ಸಂಪರ್ಕಕ್ಕೆ ಬರಲಿಲ್ಲ ಅದಕ್ಕೆ ಕೆಲಸವನ್ನು ನಿಲ್ಲಿಸಲಾಗಿದೆ ಎಂದು ಎಸ್ಡಿ–ಎಮ್ಸಿ ಅದ್ಯಕ್ಷ ತಿರುಪತಿ ಯವರು ಶಿಕ್ಷಣ ಇಲಾಖೆ ಅಧಿಕಾರಿಗಳು ಮತ್ತು ಜೆಇ ವೆಂಕಟೇಶ ಬೇಜವವ್ದಾರಿ ಅಧಿಕಾರಿಗಳ ವಿರುದ್ಧ ತೀವ್ರವಾಗಿ ಆರೋಪ ಮಾಡಿದ್ದಾರೆ.

# ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮತ್ಸ್ಯ ಸಂಜೀವಿನಿ ಯೋಜನೆಯಡಿ ಕೆರೆಗೆ ಮೀನು ಬಿಡುವ ಕಾರ್ಯಕ್ರಮಕ್ಕೆ ಚಾಲನೆ

❑ ನೈಜ್ಯ ದೆಸೆ ನ್ಯೂಸ್

ಮಸ್ಕಿ: ಸ್ವ ಸಹಾಯ ಒಕ್ಕೂಟದ ಮಹಿಳೆಯರು ಮತ್ಸ್ಯ ಸಂಜೀವಿನಿ ಮೂಲಕ ಉಪ ಆದ–ಾಯ ಕಂಡುಕೊಳ್ಳಬಹುದಾಗಿದೆ ಎಂದು ಮಸ್ಕಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಅಮರೇಶ ಯಾದವ ಹೇಳಿದರು.

ಮಸ್ಕಿ ತಾಲೂಕಿನ ಗುಡದೂರು ಗ್ರಾಮ ಪಂಚಾಯತಿಯ ವ್ಯಾಪ್ತಿಯ ಹಸಮಕಲ್ ಗ್ರಾಮದ ಕೆರೆಯಲ್ಲಿ ಮಂಗಳವಾರ ಹಸಮಕಲ್ ಗ್ರಾಮದ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಯೋಜನೆಯಡಿ ಶ್ರೀ ಅಂಬಾದೇವಿ ಸಂಜೀವಿನಿ ಗ್ರಾಮ ಪಂಚಾಯತಿ ಮಟ್ಟದ ಒಕ್ಕೂಟದ ಆಶ್ರಯದಲ್ಲಿ ಮತ್ಸ್ಯ ಸಂಜೀವಿನಿ ಯೋಜನೆಯಡಿ ಕೆರೆಗೆ ಮೀನು ಬಿಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಮಹಿಳೆಯರ ಸಬಲೀಕರಣಕ್ಕೆ ರಾಜ್ಯ ಸರ್ಕಾರ ನೂತನವಾಗಿ ಮತ್ಸ್ಯ ಸಂಜೀವಿನಿ ಮತ್ತು ಕುಕ್ಕುಟ ಯೋಜನೆ ಜಾರಿಗೊಳಿಸಿದೆ. ಮತ್ಸ್ಯ ಸಂಜೀವಿನಿಯಡಿ ಗ್ರಾಪಂ ವ್ಯಾಪ್ತಿಯ ಕೆರೆಯಲ್ಲಿ



ಮೀನು ಸಾಕಣೆ ಕೈಗೊಂಡರೆ, ಅತ್ಯಂತ ಕಡಿಮೆ ಮೊತ್ತದಲ್ಲಿ ಮೀನು ಮರಿಗಳನ್ನು ಒದಗಿಸಲಾಗುತ್ತಿದೆ. ಮೀನು ಮರಿಗಳ ಪಾಲನೆ ಪೋಷಣೆ ಕು–ರಿತು ಮೀನುಗಾರಿಕೆ ಇಲಾಖೆ ಅಧಿಕಾರಿಗಳಿಂದ ಅಗತ್ಯ ಮಾರ್ಗದರ್ಶನ ಒದಗಿಸಲಾಗುವುದು.

ಅಲ್ಲದೇ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಲಾಗುವುದು. ಅದೇ ರೀತಿ ಕುಕ್ಕುಟ ಯೋಜನೆಯಡಿ ಕೋಳಿಗಳ ರಕ್ಷಣೆಗೆ ಶೆಡ್ ಒದಗಿಸುವುದಲ್ಲದೇ, ಮೊಟ್ಟೆಗಳನ್ನು ಹತ್ತಿರದ ಅಂಗನವಾಡಿ, ಶಾಲೆಗಳಿಗೆ ಖರೀದಿಸಲಾಗುವುದು ಎಂದರು. ಈ ವೇಳೆ ಒಕ್ಕೂಟದ ಅಧ್ಯಕ್ಷೆ ಪಾರ್ವತಮ್ಮ, ಗುಡದೂರು ಗ್ರಾಪಂ ಸದಸ್ಯರಾದ ಶಿವರಾಜ್, ಗುಡದೂರು ಗ್ರಾಪಂ ಅಭಿವೃದ್ಧಿ ಅಧಿಕಾರಿ ಕೃಷ್ಣ ಹುನಗುಂದ, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಯೋಜನೆಯ ತಾಲೂಕು ವ್ಯವಸ್ಥಾಪಕರಾದ ಮೌನೇಶ್, ವಲಯ ಮೇಲ್ವಿಚಾರಕರಾದ ಪ್ರಕಾಶ್, ರಾಜೀವ್ ಗಾಂಧೀ ಪಂಚಾಯತ್ ರಾಜ್ ಫೆಲೋ ವಿನೋದ್, ಬಿಆರ್ ಪಿ ಭವಾನಿ ಎಂಬಿಕೆ ಶಿವಲಿಂಗಮ್ಮ, ಪಶು ಸಖಿ ಫ–ರೀದಾಬೇಗಂ, ಶ್ರೀ ಲಕ್ಷ್ಮೀ ಸ್ತ್ರೀ ಶಕ್ತಿ ಸ್ವ ಸಹಾಯ ಗುಂಪಿನ ಸದಸ್ಯೆಯರು, ಗ್ರಾಪಂ ಸಿಬ್ಬಂದಿ ಇದ್ದರು. ಹಸಮಕಲ್ ಗ್ರಾಮದ ಕೆರೆಯಲ್ಲಿ ಮಂಗಳವಾರ ಮತ್ಸ್ಯ ಸಂಜೀವಿನಿ ಯೋಜನೆಯಡಿ ಕೆರೆಗೆ ಮೀನು ಬಿಡುವ ಕಾರ್ಯಕ್ರಮಕ್ಕೆ ತಾಪಂ ಕಾರ್ಯ ನಿರ್ವಾಹಕ ಅಧಿಕಾರಿಗಳಾದ ಅಮರೇಶ್ ಚಾಲನೆ ನೀಡಿದರು. ಒಕ್ಕೂಟದ ಅಧ್ಯಕ್ಷೆ ಪಾರ್ವತಮ್ಮ, ಗುಡದೂರು ಗ್ರಾಪಂ ಅಭಿವೃದ್ಧಿ ಅಧಿಕಾ–ರಿಗಳಾದ ಕೃಷ್ಣ ಹುನಗುಂದ ಇತರರಿದ್ದರು.

# ಮುಖ್ಯ ಗುರುಗಳ ಹುದ್ದೆಯಿಂದ ಹಿರಿಯ ಮುಖ್ಯ ಗುರುಗಳ ಹುದ್ದೆಗೆ, ಹಾಗೂ ಬಿಪಿಎಡ್ ಮುಗಿಸಿರತಕ್ಕಂತಹ ದೈಹಿಕ ಶಿಕ್ಷಕರನ್ನ ಗ್ರೇಡ್ 1 ದೈಹಿಕ ಶಿಕ್ಷಕರ ಹುದ್ದೆಗೆ ಬಡ್ತಿ ನೀಡಲು ಮನವಿ



❑ ನೈಜ್ಯ ದೆಸೆ ನ್ಯೂಸ್

ಬೆಳಗಾವಿ: ರಾಷ್ಟ್ರದ ಭದ್ರ ಬುನಾದಿ ಪ್ರಾಥಮಿಕ ಶಿಕ್ಷಣ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದಿಂದ ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಆಯುಕ್ತರಾದ ಸನ್ಮಾನ್ಯ ಶ್ರೀ ವಿಕಾಸ ಸುರಳ್ಕರ್ ಐಎಎಸ್ ಅವರನ್ನು ಭೇಟಿ ಮಾಡಿ, ಮುಖ್ಯ ಗುರುಗಳ ಹುದ್ದೆಯಿಂದ ಹಿರಿಯ ಮುಖ್ಯ ಗುರುಗಳ ಹುದ್ದೆಗೆ, ಬಿಪಿಎಡ್ ಮುಗಿಸಿರತಕ್ಕಂತಹ ದೈಹಿಕ ಶಿಕ್ಷಕರನ್ನ ಗ್ರೇಡ್ 1 ದೈಹಿಕ ಶಿಕ್ಷಕರ ಹುದ್ದೆಗೆ ಬಡ್ತಿ ನೀಡಲು ಮನವಿ ಸಲ್ಲಿಸಲಾಯಿತು.

**ಮಾನ್ಯ ಆಯುಕ್ತರು, ಮಾನ್ಯ ನಿರ್ದೇಶಕರಾದ ಅನಿತಾ ನಜಾರೆರವರನ್ನು ಸುವರ್ಣಸೌಧದ ಅವರ ಕಚೇರಿಗೆ ಕರೆಸಿಕೊಂಡು ಬೆಳಗಾವಿ ಅಧಿವೇಶನ ಮುಗಿದ ಮೇಲೆ ವೇಳಾ ಪಟ್ಟಿಯನ್ನ ಹೊರಡಿಸಲು ನಿರ್ದೇಶನವನ್ನು ನೀಡಿದರು. ಇನ್ನುಳಿದಂತೆ ಎಲ್ಲಾ ರೀತಿಯ ಬಡ್ತಿ ಪ್ರಕ್ರಿಯೆಗಳನ್ನು ಪ್ರಾರಂಭಿಸಲು ಪ್ರಾಥಮಿಕ ಹಂತದಿಂದ ಪ್ರೌಢ, ಪ್ರಾಥಮಿಕ ಹಂತದಿಂದ ಮುಖ್ಯ ಗುರುಗಳ ಹುದ್ದೆಗೆ ಬಡ್ತಿಯನ್ನು ಪ್ರಾರಂಭಿಸಲು ಕೂಡ ನಿರಂತರ ಪ್ರಯತ್ನವನ್ನು ಮಾಡುತ್ತೀವಿ ಎಂದು ತಿಳಿಸಿದರು.**

# ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್ ಒಕ್ಕೂಟಗಳ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮ

❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ತಾಲೂಕಿನ ನೀರಮಾನ್ವಿ ಗ್ರಾಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ. ಸಿ. ಟ್ರಸ್ಟ್ ವತಿಯಿಂದ ನಡೆದ ನೀರಮಾನ್ವಿ ಮತ್ತು ಮಾಡಗಿರಿ ವಲಯದ ಒಕ್ಕೂಟಗಳ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮವನ್ನು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್ ತಾಲೂಕ ಯೋಜನಾಧಿಕಾರಿ ಸುನಿತಾ ಪ್ರಭು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಮಹಿಳೆಯರು ಸಂಘದ ಮೂಲಕ ಉಳಿತಾಯವನ್ನು ಮಾಡಿ ಅಗತ್ಯವಾದ ಆರ್ಥಿಕ ನೆರವಿನ ಜೋತೆಗೆ ಸಂಘದ ಗುಣಮಟ್ಟವನ್ನು**



ಕಾಯ್ದುಕೊಂಡು ಲಾಭಂಶವನ್ನು ಹೊಂದುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳುವುದರಿಂದ ಸ್ವಾವಲಂಬಿ ಜೀವನವನ್ನು ನಡೆಸುವುದಕ್ಕೆ ಸಾಧ್ಯ ಮಹಿಳೆಯರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣದ ಜೋತೆಗೆ ಸಂಸ್ಕಾರವನ್ನು, ನಮ್ಮ ಸಂಸ್ಕೃತಿಯನ್ನು, ಪರಿಚಯಿಸಿದಾಗ ಮಾತ್ರ ಉತ್ತಮ ಪ್ರಜೆಗಳಾಗುವುದಕ್ಕೆ ಸಾಧ್ಯ ಎಂದು ತಿಳಿಸಿದರು. ಅತಿ ಹೆಚ್ಚು ಲಾಭಾಂಶ ಹೊಂದಿದ ಎರಡು ಸಂಘಗಳಿಗೆ ಪ್ರಮಾಣ ಪತ್ರವನ್ನು ವಿತರಿಸಲಾಯಿತು ವಿಮಾ ಯೋಜನೆಗಳ ಬಗ್ಗೆ ರಾಯಚೂರು ಎನ್,ಆರ್.ಎಲ್.ಎಂ. ಅಧಿಕಾರಿ ನಿಂಗಪ್ಪ ಮಾಹಿತಿ ನೀಡಿದರು .ಟಿ.ಎನ್.ಓ. ತಿಮಪ್ಪ ಸಿ.ಎಸ್.ಸಿ .ಕೇಂದ್ರ ಗಳ ಬಗ್ಗೆ ಮಾಹಿತಿ ನೀಡಿದರು ನಿರಮಾನ್ವಿ ಒಕ್ಕೂಟದ ಅಧ್ಯಕ್ಷರಾದ ಯಲ್ಲಪ್ಪ, ಮಾಡಗಿರಿ ಒಕ್ಕೂಟದ ಅಧ್ಯಕ್ಷರಾದ ಸಂಗೀತ, ನಿವೃತ್ತ ಪೊಲೀಸ್ ನಿರೀಕ್ಷಕರಾದ ವೀರನಗೌಡ, ಸೇರಿದಂತೆ ವಲಯದ ಮೇಲ್ವಿಚಾರಕರು, ಸೇವಾ ಪ್ರತಿನಿಧಿಗಳು, ವಿ.ಎಲ್.ಇ. ಗಳು ಸಂಘದ ನೂರಾರು ಮಹಿಳಾ ಸದಸ್ಯರು ಭಾಗವಹಿಸಿದರು.